MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 320 | ಶುಕ್ರವಾರ : 10-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 320 | FRIDAY : 10-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನಡುಗಡ್ಡೆ ಸಂತ್ರಸ್ತರಿಗೆ ಶಾಶ್ವತ ಸ್ಥಳಾಂತರಕ್ಕೆ ಆಗ್ರಹ ಸಹಾಯಕ ಆಯುಕ್ತರ ನೇತೃತ್ವದಲ್ಲಿ ಪೂರ್ವಭಾವಿ ಸಭೆ



ಪರ್ಯಾಯ ಭೂಮಿ ಗುರುತಿಸಿ ಉಳುಮೆ ಮಾಡುವಂತಹ ಜಮೀನು ನೀಡಲು ಜಿಲ್ಲಾಧಿಕಾರಿ ಪತ್ರ ಬರೆದು ಆದಷ್ಟು ಬೇಗನೆ ನಿಮ್ಮನ್ನು ಸ್ಥಳಾಂತರ ಮಾಡಲು ಪ್ರಯತ್ನ ಮಾಡಲಾಗುತ್ತದೆ.

–ಸಹಾಯಕ ಆಯುಕ್ತ ಬಸವಣೆಪ್ಪ ಕಲಶೆಟ್ಟಿ.

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.9–** ಕೃಷ್ಣ ನದಿಯ ನಡುಗಡ್ಡೆ ವ್ಯಾಪ್ತಿಯಲ್ಲಿ ಬರುವ ಮ್ಯಾದರಗಡ್ಡಿ, ಕರಕಲಗಡ್ಡಿ, ವೆಂಕಮ್ಮಗಡ್ಡಿ ಜನರ ಶಾಶ್ವತ ಸ್ಥಳಾಂತರ ಮಾಡಿ ಸಂತ್ರಸ್ತರಿಗೆ ಅನುಕೂಲ ಮಾಡಿಕೊಂಡಬೇಕೆಂದು ದಲಿತ ಮುಖಂಡ ಹನುಮಂತಪ್ಪ ವೆಂಕಟಾಪೂರ ಆಗ್ರಹಿಸಿದರು.

ಪಟ್ಟಣದ ಸಹಾಯಕ ಆಯುಕ್ತರ ಕಛೇರಿಯಲ್ಲಿ ನಡುಗಡ್ಡೆ ಸಂತ್ರಸ್ತರು ಹಾಗೂ ದಲಿತ ಮುಖಂಡರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ಸರ್ಕಾರ ಎರಡು ದಶಕಗಳಿಂದ ಪ್ರವಾಹದ ಭೀಕರತೆ ಅರಿತು ಶಾಶ್ವತ ಸ್ಥಳಾಂತರ ಭರವಸೆ ನೀಡುತ್ತ ಬಂದಿದೆ. ಸಚಿವ, ಸಂಸದರು, ಶಾಸಕರು, ಸರ್ಕಾರದ ಕಾರ್ಯದರ್ಶಿ, ಶಾಸಕರು ಅಧಿಕಾರಿಗಳ ತಂಡ ನೀಡುತ್ತ ಬಂದಿರುವ ಭರವಸೆಗಳಿಂದ ಜನತೆ ರೋಸಿ ಹೋಗಿದ್ದಾರೆ. ಕೃಷ್ಣಾ ಪ್ರವಾಹದಲ್ಲಿ ಜೀವ ಕಳೆದುಕೊಂಡ ಕುಟುಂಬಗಳು ದಶಕ ಕಳೆದರು ಪರಿಹಾರ ಪಡೆದಿಲ್ಲ, ಜಾನುವಾರು ಕಳೆದರು ಪರಿಹಾರ ನೀಡಿಲ್ಲ ಎಂದು ದೂರಿದರು.

ನದಿಯಿಂದ ಬೆಳೆಹಾನಿ, ಜಾನುವಾರು ಸೇರಿದಂತೆ ಸಾಕಷ್ಟು ನಷ್ಟ ಉಂಟಾಗಿದ್ದರು ಸರ್ಕಾರ ಪರಿಹಾರ ಕೊಡುತ್ತಿಲ್ಲ, ನಮಗೆ ಶಾಶ್ವತ ಸ್ಥಳಾಂತರ ಮಾಡಿ ನಮ್ಮಗೆ ಬೇರೆ ಕಡೆ ಭೂಮಿ ಕೊಡಿಸಿ ಎಂದು ತಮ್ಮ ಅಳಲನ್ನು ತೊಡಿಕೊಂಡರು.ತಾಲೂಕಿನ ಸಾಕಷ್ಟು ಅರಣ್ಯ ಭೂಮಿ ಇದ್ದು, ಅನಧಿಕೃತವಾಗಿ ಉಳುಮೆ ಮಾಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗದುಕೊಳ್ಳಿ ಎಂದು ಒತ್ತಾಯಿಸಿದರು. ಸಂತ್ರಸ್ತರಿಗೆ ಪಡಿತರ ಚೀಟಿ, ಮೂಲಭೂತ ಸೌಕರ್ಯ ಪಡೆಯದೆ ವಂಚಿತರಾಗಿದ್ದಾರೆ. ನಮ್ಮ ಬಗ್ಗೆ ಯಾರಿಗೆ ಜವಾಬ್ದಾರಿ ಇಲ್ಲ ಎಂದರು.ನಮ್ಮ ಜಮೀನು ಭೂಸ್ವಾದಿನ ಪಡೆದುಕೊಂಡು ನಮಗೆ ಸೂಕ್ತ ಪರಿಹಾರ ನೀಡಬೇಕೆ'ಂದರು.

ಈ ಸಂದರ್ಭದಲ್ಲಿ ತಹಶಿಲ್ದಾರರ ಸತ್ಯಮ್ಮ, ಸಂತ್ರಸ್ತರಾದ ಹನುಮನಗೌಡ ದಳಪತಿ, ಹನುಮಪ್ಪ, ದೇವಮ್ಮ, ಪಾರ್ವತಿ, ಆದಪ್ಪ, ಬಸಪ್ಪ ದಲಿತ ಮುಖಂಡರಾದ ಶರಣಪ್ಪ ಕಟ್ಟಿಮನಿ, ಆಜಪ್ಪ ಕರಡಕಲ್, ಬಸವರಾಜ ಬಂಕದಮನಿ, ಲಕ್ಕಪ್ಪ ತುಂಬಲಗಡ್ಡಿ, ನಾಗರಾಜ ಯರಡೋಣಿ ಸೇರಿದಂತೆ ಇದ್ದರು.

## ಸರ್ವೇ ಬಾಂಡುಗಳನ್ನು ತಾತ್ಕಾಲಿಕ ಮುಂದೂಡುವಂತೆ ಆಗ್ರಹಿಸಿ ತಹಸೀಲ್ದಾರರಿಗೆ ಮನವಿ

ಯುವ ಮಾರ್ಗ ಸುದ್ದಿ

**ಸಿರವಾರ, ಅ.9–**ತಾಲೂಕಿನಲ್ಲಿ 2.5. 2.2.743 2. ರಾಷ್ಟ್ರೀಯ ಹೆದ್ದಾರಿಯು 7ನೇ ಪ್ಯಾಕೇಜ್ ಹಾದು ಹೋಗುತ್ತಿದ್ದು ಸಿರವಾರ ಸಿಮಾಂತರದ ಜಮಿನುನಲ್ಲಿ ಸರ್ವೆ ಮಾಡಿ ಬಂಡುಗಳನ್ನು ರೈತರಿಗೆ ಹಾಕಲಾಗು ತಿದ್ದು ಯಾವುದೇ ಮಾಹಿತಿ ನೀಡದೆ ಬಾಂಡ್ಗಳನ್ನು ಹಾಕುತ್ತಿದ್ದು ಅದರಿಂದ ರೈತರು ಬೆಳೆದ ಬೆಳೆಗಳು ಬಾಂಡ್ ಹಾಕುವ ಕೆಲಸಗಾರರು ತುಳಿದು ಹಾಳು ಮಾಡುತಿದ್ದು. ಅದ್ದರಿಂದ ಇನ್ನೂ ಒಂದು ತಿಂಗಳು ಡಿಸೇಂಬರವರಗೆ ಬೆಳೆದ ಭತ್ತ ಕಠಾವಿಗೆ ಬರಲಿದೆ ಅದಕ್ಕಾಗಿ ರೈತರ ಹಿತದೃಷ್ಟಿಯಿಂದ ತಾವುಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಬೆಳೆ ಕಠಾವು ಆದ ನಂತರ ಬಾಂಡ್ಗಳನ್ನು ಹಾಕಬೇಕೆಂದು ಕರವೇ ಪ್ರವೀಣ್ ಶೆಟ್ಟಿ ಬಣ ಸಿರವಾರ ತಾಲೂಕು ಘಟಕದಿಂದ ಮತ್ತು ರೈತರಿಂದ ತಹಸೀಲ್ದಾರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ತಾಲೂಕಾಧ್ಯಕ್ಷ ಕೆ. ರಾಘವೇಂದ್ರ



ಖಾಜನಗೌಡ, ಯಲ್ಲಪ್ಪ ದೊರೆ, ಎಚ್.ಕೆ.ಕರಿಯಪ್ಪ,ಸಾಬಣ್ಣ ನಾಯಕ ಹುಣಚೆಡ, ಅಚ್ಚ ಸಿದ್ದಲಿಂಗೇಶ್ವರ, ನಾಗರಾಜ, ಖಾಜನಗೌಡಗೌಡ, ರವಿಕುಮಾರ, ಖಾಜನಗೌಡ, ಸುರೇಶ, ಖಾಜನಗೌಡ,ಕೃಷ್ಣ, ಖಾಜನಗೌಡ, ಶೇಖರಗೌಡ, ಎಚ್ ಕೆ ಅಂಬರೀಶ, ಯಲ್ಲಪ್ಪ, ಚನ್ನಕೇಶವಲು, ನರಸಪ್ಪ,ಮಹ್ಮದ್, ಇಸ್ಮಾಯಿಲ್, ತಿಪ್ಪಣ್ಣ, ಹನುಮಂತ, ಯಲ್ಲಪ್ಪ ನಾಯಕ, ರಾಮ್ ಬಾಬು,ವರಂ ಬಾಬು ಇದ್ದರು.

## ಸ್ವಚ್ಛ ಹಸಿರು ರಾಯಚೂರಿಗಾಗಿ ಭರವಸೆಯ ಓಟ;ಪಾಲಿಕೆಯಿಂದ ವಿಶೇಷ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.9–** ನಗರದ ಯುವಜನರು ಸಕಾರಾತ್ಮಕ ಚಟುವಟಿಕೆಗಳ ಕಡೆಗೆ ಆಕರ್ಷಿತರಾಗಬೇಕು ಮತ್ತು ಅವರ ಶಕ್ತಿಯನ್ನು ಸಮಾಜ ಹಿತದ ಕಡೆಗೆ ಹರಿಸಬೇಕು ಎನ್ನುವ ಸದುದ್ದೇಶದಿಂದ ಮಹಾನಗರ ಪಾಲಿಕೆಯು ವಿವಿಧ ಇಲಾಖೆಗಳ ಸಹಯೋಗದಲ್ಲಿ ಅಕ್ಟೋಬರ್ 09ರಂದು ಮ್ಯಾರಾಥಾನ್ ಸ್ಪರ್ಧೆಯನ್ನು ಆಯೋಜನೆ ಮಾಡಿತ್ತು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣಾಧಿಕಾರಿಗಳ (ಕೆ.ಎಸ್.ಎ.ಪಿ.ಎಸ್) ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ, ಸ್ವಚ್ಛ ಹಸಿರು ರಾಯಚೂರಿಗಾಗಿ ಭರವಸೆಯ ಓಟ ಎಂಬ ವಿಷಯದಡಿಯಲ್ಲಿ 5 ಕಿಲೋಮೀಟರ್ ಮ್ಯಾರಥಾನ್ ಸ್ಪರ್ಧೆಗೆ ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಅವರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಆಯುಕ್ತರು, ಪ್ರಸ್ತುತ ಯುವಜನರು ವಿವಿಧ ನಕಾರಾತ್ಮಕ ಚಟುವಟಿಕೆಗಳ ಕಡೆಗೆ ಒಲವು ತೋರುವ ಸನ್ನಿವೇಶದಲ್ಲಿ ಅವರನ್ನು ಸರಿಯಾದ ಮಾರ್ಗದರ್ಶನ ಮತ್ತು ಸಕ್ರಿಯ ಭಾಗವಹಿಸುವಿಕೆಯ ಮೂಲಕ ಸಮುದಾಯದ ಮುಖ್ಯಧಾರೆಗೆ ತರುವುದು ಅತ್ಯಗತ್ಯವಾಗಿದ್ದು, ಈ ಉದ್ದೇಶದಿಂದಲೇ ಇಂತಹ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದರು.




ಯುವಜನರು ನಮ್ಮ ನಗರದ ಭವಿಷ್ಯ. ಅವರನ್ನು ಸಕಾರಾತ್ಮಕವಾಗಿ ಒಟ್ಟುಗೂಡಿಸುವುದು ನಮ್ಮ ಕರ್ತವ್ಯ. ಇಂದಿನ ಓಟ ಇದರ ಒಂದು ಹಂತ ಮಾತ್ರ. ಯುವಜನರು ದುರ್ಮಾರ್ಗಕ್ಕೆ ತಿರುಗದೆ, ಸಮಾಜದ ಅಭಿವೃದ್ಧಿಯ ಮುಖ್ಯಸ್ಥರಾಗಲು ನಾವು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ ಮತ್ತು ಮುಂದೆಯೂ ಹಮ್ಮಿಕೊಳ್ಳಲಿದ್ದೇವೆ ಎಂದರು.

ಈ ಕಾರ್ಯಕ್ರಮದ ಯಶಸ್ಸು ಎಂದರೆ ಅದು ಯುವಜನರನ್ನು ಒಳಗೊಳ್ಳುವುದಾಗಿದೆ. ಹೆಚ್ಚಿನ ಕಾರ್ಯಕ್ರಮಗಳನ್ನು ಯೋಜಿಸುವಲ್ಲಿ ಪಾಲಿಕೆ ಮತ್ತು ಇತರೆ ಸಂಸ್ಥೆಗಳನ್ನು ಪ್ರೋತ್ಸಾಹಿಸುವುದಾಗಿದೆ. ಭವಿಷ್ಯದಲ್ಲಿ ಕ್ರಿಕೆಟ್, ವಿಜ್ಞಾನ ಪ್ರದರ್ಶನ, ಸ್ವಚ್ಛತಾ ಅಭಿಯಾನ, ಕ್ರೀಡಾ ಸ್ಪರ್ಧೆಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಯೋಜನೆಗಳಿವೆ ಎಂದರು.

ಯುವಕರು ದುಶ್ಚಟಗಳಿಗೆ ಬಲಿಯಾಗಿ ಆಯಸ್ಸನ್ನು ಕಳೆದುಕೊಳ್ಳದೆ, ಉತ್ತಮ ರೀತಿಯಲ್ಲಿ ಜೀವನ ಸಾಗಿಸಿ ಸಾಧನೆ ಮಾಡುವ ಕಡೆ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಆರೋಗ್ಯಕರ ಜೀವನಶೈಲಿ ಮತ್ತು ಏಡ್ಸ್ ನಿಯಂತ್ರಣದ ಬಗ್ಗೆ ಅರಿವು ಮೂಡಿಸುವುದು ನಮ್ಮ ಉದ್ದೇಶ. ಈ ರೀತಿಯ ಸಮುದಾಯ ಕಾರ್ಯಕ್ರಮಗಳು ಆರೋಗ್ಯ ಮತ್ತು ಜಾಗೃತಿಯ ಸಂದೇಶವನ್ನು ತಲುಪಿಸಲು ಈ ಕಾರ್ಯಕ್ರಮವು ಉತ್ತಮ ವೇದಿಕೆಯಾಗಿದೆ ಎಂದರು.(2ನೇಪುಟಕ್ಕೆ)

## ಕ.ಕ. ನ್ಯಾಯಪೂರ್ಣ ಅಭಿವೃದ್ಧಿಗಾಗಿ: ಜಾಥಾ ಹಕ್ಕುಗಳಿಗಾಗಿ ನಿಷ್ಠೆಯ ನಡಿಗೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.9–**ಇದೇ ಅಕ್ಟೋಬರ್ 06 ರಿಂದ 13ರವರೆಗೆ ಬಳ್ಳಾರಿ ಯಿಂದ ಬೀದರ್ ವರೆಗೆ ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ನ್ಯಾಯ ಸಿಗಬೇಕೆಂಬ ಉದ್ದೇಶದಿಂದ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಪಕ್ಷದಿಂದ"ಕಲ್ಯಾಣ ಕರ್ನಾಟಕ ನ್ಯಾಯಪೂರ್ಣ ಅಭಿವೃದ್ಧಿ ಜಾಥಾ" ಆಯೋಜಿಸಲಾಯಿತು ಈ ಜಾಥಾ ಬಳ್ಳಾರಿಯಿಂದ ಆರಂಭವಾಗಿ ಕಲಬುರ್ಗಿ ತನಕ ನಡೆಯಲಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯ ಅಧ್ಯಕ್ಷರು ವಕೀಲರು ತಾಹಿರ್ ಹುಸೇನ್ ವಾಲ್ಮೀಕಿ ವೃತ್ತದಲ್ಲಿ ಜಾಥವನ್ನಾ ಉದ್ದೇಶಿಸಿ ಮಾತನಾಡಿದರು.




ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿ 78 ವರ್ಷಗಳಾದರೂ ಕಲ್ಯಾಣ ಕರ್ನಾಟಕ ಭಾಗ ಇಂದು ರಾಜ್ಯದ ಅತ್ಯಂತ ಹಿಂದುಳಿದ ಪ್ರದೇಶವಾಗಿಯೇ ಉಳಿದಿದೆ. ಸಂವಿಧಾನದ 98ನೇ ತಿದ್ದುಪಡಿ ಮೂಲಕ 2013 ರಲ್ಲಿ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ದೊರೆತಿದ್ದರೂ, ಒಂದು ವಿಶೇಷ ನಿಗಮ 'ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ'ಯ ಹೆಸರಿನಲ್ಲಿ ಸ್ಥಾಪಿಸಿ ಸುಮಾರು 25,000 ಕೋಟಿ ಅನುದಾನ ಕಳೆದ 12 ವರ್ಷಗಳಲ್ಲಿ ಬಿಡುಗಡೆಯಾದರೂ, ಅಭಿವೃದ್ಧಿ ಫಲಿತಾಂಶಗಳು ಜನರ ಕೈ ಸೇರಿಲ್ಲ.

ಕಾರ್ಮಿಕರು ಕೆಲಸ ಹುಡುಕಿಕೊಂಡು ಗುಳೆ ಹೋಗುವುದು ತಪ್ಪಲಿಲ್ಲ.ಯುವಕರಿಗೆ ಅರ್ಹತೆಗೆ ತಕ್ಕಂತೆ ಉದ್ಯೋಗ ಸಿಗುತ್ತಿಲ್ಲ, ಜನಸಂಖ್ಯೆಗೆ ಅನುಗುಣವಾಗಿ ಆರೋಗ್ಯ ಕೇಂದ್ರಗಳು ಸ್ಥಾಪನೆ ಯಾಗಿಲ್ಲ.ಅಪೌಷ್ಟಿಕತೆಯಿಂದ ಮಕ್ಕಳ ಹಾಗು ಬಾಣಂತಿಯರ ಸಾವಿನ ಸರಣಿ ನಿಂತಿಲ್ಲ. ಉರಿ ಬಿಸಿಲಿನಲ್ಲಿ ಶ್ರಮಿಸುವ ಅನ್ನದಾತನ ಸಮಸ್ಯೆಗಳು ಬಗೆಹರಿಯದೆ ಆತ್ಮಹತ್ಯೆಗಳು ನಿಂತಿಲ್ಲ. ಇಲ್ಲಿ ನೆಲೆಸುವ ಹಿಂದುಳಿದ, ಅಲ್ಪಸಂಖ್ಯೆ, ದಲಿತ, ಅದಿವಾಸಿಗಳಿಗೆ ಇನ್ನು ತನಕ ಸಾಮಾಜಿಕ ನ್ಯಾಯ ದೊರಕಲಿಲ್ಲ. ಪ್ರತಿ ಬಾರಿ ಹೊಸ ಯೋಜನೆಗಳ ಭರವಸೆ, ದೊಡ್ಡ ದೊಡ್ಡ ಅನುದಾನಗಳ ಘೋಷಣೆ ಯಾಗುತ್ತಿದೆ. ಆದರೆ, ಅನುದಾನ ಎಲ್ಲಿ ಹೋಗುತ್ತಿದೆ? ಯಾರಿಗೆ ಯೋಜನೆಗಳ ಲಾಭ ತಲುಪುತ್ತಿದೆ?

ಬೆಂಗಳೂರು ವಿಭಾಗದಲ್ಲಿ ತಲಾ ಆದಾಯ 5.01 ಆದರೆ ಈ ಭಾಗದ ತಲಾ ಆದಾಯ 1.73. ಮೈಸೂರು ಭಾಗದಲ್ಲಿ 10 ಹಿಂದುಳಿದ ತಾಲೂಕು ಗಳಿದ್ದರೆ ಈ ಭಾಗದಲ್ಲಿ 29 ಹಿಂದುಳಿದ ತಾಲೂ ಕುಗಳು ರಾಜ್ಯದಲ್ಲಿ ಅತಿ ಬಡ ಜಿಲ್ಲೆಗಳಲ್ಲಿ ಅತ್ಯಂತ ಬಡ ಜಿಲ್ಲೆಗಳು ಈ ಭಾಗದ ಯಾದಗಿರಿ, ರಾಯಚೂರು, ಕಲಬುರಗಿ ಮತ್ತು ಕೊಪ್ಪಳ ಆಗಿವೆ. ಇಡೀ ರಾಜ್ಯದಲ್ಲಿ ಸಣ್ಣ, ಮಧ್ಯಮ ಕೈಗಾರಿಕೆ ಗಳ ಒಟ್ಟು ಸಂಖ್ಯೆ(2ನೇಪುಟಕ್ಕೆ)

## ಸಿಂಧನೂರು ವಕೀಲರ ಸಂಘದ ಸದಸ್ಯರಿಗೆ ಕೊಲೆ ಬೆದರಿಕೆ: ಸೂಕ್ತ ಕ್ರಮಕ್ಕೆ ಮಾನ್ವಿ ವಕೀಲರ ಸಂಘದಿಂದ ಆಗ್ರಹ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.9–** ಸಿಂಧನೂರು ವಕೀಲರ ಸಂಘದ ಸದಸ್ಯರಾದ ವಕೀಲ ಶೇಖರಪ್ಪ ಧುಮತಿ ಅವರಿಗೆ ಅನಾಮಧೇಯ ವ್ಯಕ್ತಿಗಳಿಂದ ಕೊಲೆ ಬೆದರಿಕೆ ಬಂದಿರುವ ಕುರಿತು ಮಾನ್ವಿ ವಕೀಲರ ಸಂಘ (ರಿ) ಗಂಭೀರ ಕಳವಳ ವ್ಯಕ್ತಪಡಿಸಿದೆ. ಈ ಬೆದರಿಕೆ ಹಾಕಿದವರ ವಿರುದ್ಧ ತಕ್ಷಣವೇ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ಸಂತ್ರಸ್ತ ವಕೀಲರಿಗೆ ಪೊಲೀಸ್ ರಕ್ಷಣೆ ನೀಡಬೇಕೆಂದು ಮಾನ್ವಿ ವಕೀಲರ ಸಂಘ ಗುರುವಾರ ತಹಶೀಲ್ದಾರ್ ಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ವಕೀಲ ಶೇಖರಪ್ಪ ಧುಮತಿ ಅವರಿಗೆ ಅನಾಮಧೇಯ ವ್ಯಕ್ತಿಗಳು ದೂರವಾಣಿ ಕರೆ ಮಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಲ್ಲದೆ, "ನಿಮ್ಮನ್ನು ಮತ್ತು ನಿಮ್ಮ ಕುಟುಂಬದವರನ್ನು ಸುಪಾರಿ ನೀಡಿ ಕೊಲೆ ಮಾಡಿಸುತ್ತೇವೆ" ಎಂದು ನೇರವಾಗಿ




ಬೆದರಿಕೆ ಹಾಕಲಾಗಿದೆ. ಈ ಕೊಲೆ ಬೆದರಿಕೆ ಹಾಕಿರುವವರ ವಿರುದ್ಧ ತನಿಖೆ ಕೈಗೊಂಡು ಪ್ರಕರಣ ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸುವಂತೆ ಮತ್ತು ವಕೀಲ ಶೇಖರಪ್ಪ ಧುಮತಿ ಅವರಿಗೆ ಸೂಕ್ತ ಕಾನೂನು ರಕ್ಷಣೆ ಒದಗಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಕೀಲರಾದ ರವಿಕುಮಾರ್ ಪಾಟೀಲ್, ಮನೋಹರ್ ವಿಶ್ವಕರ್ಮ, ಕೊರವಯ್ಯ ನಾಯಕ, ಗುಮ್ಮ ಬಸವರಾಜ, ಬಿ.ಕೆ.ಅಮರೇಶಪ್ಪ, ರಾಜಾ ಶ್ಯಾಮಸುಂದರ ನಾಯಕ, ಮಲ್ಲಿಕಾರ್ಜುನ ಪಾಟೀಲ್, ವೀರನಗೌಡ, ಶಿವರಾಜ ನಾಯಕ ಚನ್ನಬಸವ ನಾಯಕ, ದತ್ತಾತ್ರೇಯ , ಮಲ್ಲೇಶ ಮಾಚನೂರು, ಯಲ್ಲಪ್ಪ ಹಿರೇಬಾದರದಿನ್ನಿ ಇದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಿ: ಸುರೇಶ ವರ್ಮಾ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.9–** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಿದ್ದಪಡಿಸಲಾಗುತ್ತಿರುವ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಿರುತ್ತದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ತಿಳಿಸಿದ್ದಾರೆ.

ಅರ್ಜಿ ನಮೂನೆ 19ರಲ್ಲಿ ಅರ್ಜಿ ಸ್ವೀಕರಿಸಲು 2025ರ ನವಂಬರ್ 06 ಕೊನೆಯ ದಿನಾಂಕ ಆಗಿರುತ್ತದೆ. 2025ರ ನವಂಬರ್ 25ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳಿಗೆ 2025ರ ನವಂಬರ್ 25ರಿಂದ 2025ರ ಡಿಸೆಂಬರ್ 10ರವರೆಗೆ ಕಾಲಾವಕಾಶ ನೀಡಲಾಗಿದೆ. 2025ರ ಡಿಸೆಂಬರ್ 30ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಪ್ರಜೇಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ ದಿನಾಂಕ:01–11–2025 ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 03 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಧಿಸಿದಂತೆ ಸಂಸ್ಥೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ. ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೋಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಭೋದನಾ ವೃತ್ತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ – 2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾ ಧಿಕಾರಿಗಳು. ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ (2ನೇಪುಟಕ್ಕೆ)

ಮೊದಲನೇಯ ಪುಟದಿಂದ

# ಕ.ಕ. ನ್ಯಾಯಪೂರ್ಣ ಅಭಿವೃದ್ಧಿಗಾಗಿ ಜಾಥಾ ಹಕ್ಕುಗಳಿಗಾಗಿ ನಿಷ್ಠೆಯ ನಡಿಗೆ

17.48 ಲಕ್ಷ ಇದ್ದು, ಈ ಪೈಕಿ ಕಲ್ಯಾಣ ಕರ್ನಾಟಕ ಭಾಗದ ಪಾಲು ಕೇವಲ 1.96 ಲಕ್ಷ ಅಂದರೆ ಕೇವಲ 11% ಮಾತ್ರ. ಕೆಲಸಕ್ಕಾಗಿ ವಲಸೆ ಹೋಗುವ ಕಾರ್ಮಿಕರು ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಅತಿಹೆಚ್ಚು ಈ ಭಾಗದವರು. ಈ ಭಾಗದಲ್ಲಿ ಪ್ರತಿ ವರುಷ ಸರಿಸುಮಾರು 10 ಸಾವಿರ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಮುಗಿಸುತ್ತಾರೆ. ಆದರೆ, ಕೆಲಸಕ್ಕೆ ಮಾತ್ರ ಬೇರೆ ಕಡೆ ವಲಸೆ ಹೋಗುತ್ತಾರೆ. ಸುಮಾರು 30 ಲಕ್ಷ ಜನ ರಕ್ತಹೀನತೆ ಮತ್ತು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಕಳೆದ ನಾಲ್ಕು ವರ್ಷಗಳಲ್ಲಿ ಸುಮಾರು 9,000 ಶಿಶುಗಳು ಮತ್ತು 600 ತಾಯಂದಿರು ಪೋಷಕಾಂಶಗಳ ಕೊರತೆಯಿಂದ ಮೃತಪಟ್ಟಿದ್ದಾರೆ. ಜನ ಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸ್ಥಾಪನೆಯಾಗಿಲ್ಲ. 1963 ಉಪ ಕೇಂದ್ರಗಳ ಅವಶ್ಯಕತೆ ಇದ್ದು, ಕೇವಲ 1519 ಕೇಂದ್ರಗಳಿವೆ. 99 ಸಮುದಾಯ ಆರೋಗ್ಯ ಕೇಂದ್ರಗಳ ಅವಶ್ಯಕತೆ ಇದ್ದು, ಕೇವಲ 58 ಕೇಂದ್ರಗಳಿವೆ. ಅಲ್ಲದೆ 395 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅವಶ್ಯಕತೆ ಇದ್ದು, 352 ಕೇಂದ್ರಗಳಿವೆ. ಒಟ್ಟಾರೆ ಸುಮಾರು 80 ಸಾವಿರ ಸರಕಾರಿ ಹುದ್ದೆಗಳು ಖಾಲಿ ಇದ್ದು ಇದರಲ್ಲಿ ಸುಮಾರು 22 ಸಾವಿರ ಶಿಕ್ಷಕರ ಹುದ್ದೆಗಳು ಇಂದಿಗೂ ಭರ್ತಿ ಯಾಗಿಲ. ಪರಿಣಾಮ ಪ್ರತಿ ಬಾರಿ ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ಫಲಿತಾಂಶ ದಲ್ಲಿ ಈ ಜಿಲ್ಲೆಗಳು ಕೊನೆ ದರ್ಜೆ ಯಲ್ಲಿ ಇರುತ್ತವೆ.

ಇಡೀ ರಾಜ್ಯ ದಲ್ಲಿ ಅತಿಹೆಚ್ಚು ಅಲ್ಪಸಂಖ್ಯಾತ, ಹಿಂದುಳಿದ ವರ್ಗದವರು ಈ ಜಿಲ್ಲೆಗಳಲ್ಲಿ ಇದ್ದಾರೆ. ಆದರೆ ಜನಸಂಖ್ಯೆಗೆ ಅನುಗುಣವಾಗಿ ಹಾಸ್ಟೆಲ್ಗಳು ಇಲ್ಲ.ಮಾನವ ಅಭಿವೃದ್ಧಿ ಸೂಚ್ಯಂಕ ಮತ್ತು ತಲಾ ಆದಾಯ ಹೆಚ್ಚಿಸಬೇಕು. ಜಿಲ್ಲಾ ಖನಿಜ ಪ್ರತಿಷ್ಠಾನ (ಆಒಈ), ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ (ಏಒಇಖಅ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಏಏಖಆಃ) ಅನುದಾನಗಳನ್ನು ಸಮರ್ಪಕವಾಗಿ ಬಳಸಬೇಕು. ಉದ್ಯೋಗ ಅವಕಾಶಗಳು ಹೆಚ್ಚಿಸಬೇಕು.

ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಮತ್ತು ಸ್ಥಳೀಯರಿಗೆ ಹೆಚ್ಚಿನ ಉದ್ಯೋಗ ಅವಕಾಶ ದೊರಕಿಸಬೇಕು

ಕಲ್ಯಾಣ ಕರ್ನಾಟಕದಲ್ಲಿ ಬಹಳಷ್ಟು ಐತಿಹಾಸಿಕ ಸ್ಮಾರಕ /ಸ್ಥಳಗಳಿದ್ದು ಈ ಭಾಗದಲ್ಲಿ ಪ್ರಾಸೋದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು.ಖಾಲಿ ಇರವು ಸರಕಾರಿ ಹುದ್ದೆಗಳು ಕೂಡಲೇ ಭರ್ತಿ ಮಾಡಬೇಕು.ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಕೈಗಾರಿಕಾ ನೀತಿ ರೂಪಿಸಬೇಕು ಮತ್ತು ಬಂಡವಾಳ ಹೂಡಿಕೆಯ ಪ್ರಮಾಣ ಹೆಚ್ಚಿಸಬೇಕು.

ಜನಸಂಖ್ಯೆ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಗಳ ನಿರ್ಮಾಣವಾಗಬೇಕು ಎಂದು ಒತ್ತಾಯಿಸಿದರು.

ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ, ಕಲ್ಯಾಣ ಕರ್ನಾಟಕ ಜನತೆಯ ಪರವಾಗಿ ಸರ್ಕಾರವನ್ನು ಎಚ್ಚರಿಸುತ್ತಿದ್ದು, ಕಲ್ಯಾಣ ಕರ್ನಾಟಕದ ಹಕ್ಕುಗಳಿಗಾಗಿ ಹೋರಾಟವನ್ನು ಮುಂದುವರಿಸಲು ಬದ್ಧವಾಗಿದೆ ಎಂದರು. ಮಾನ್ವಿ ನಗರದ ವಾಲ್ಮೀಕಿ ವೃತ್ತದಿಂದ ಬಸವ ವೃತ್ತಕ್ಕೆ ಆಗಮಿಸಿ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಭಾಗವಹಿಸಿ ಜಾತವನ್ನ ಬೆಂಬಲಿಸಿದರು ಮುಖ್ಯ ವೃತ್ತಗಳಲ್ಲಿ ರವೀಂದ್ರ ಜಾನೇಕಲ್ ಮಾರೆಪ್ಪ ಹರವಿ ಶರಣು ಮುದ್ದಮ್ಮುಗ್ಡಿ ಶರ್ಫುದ್ದೀನ್ ಪೋತ್ನಾಳ ಸುಭಾನ್ ಬೇಗ್ ಹನುಮಂತ ಕೋಟೆ ಅಬ್ದುಲ್ ರೆಹಮಾನ್ ಕರಿಮ್ ಖಾನ್ ಸಾಬ್ ಹುಸೇನ್ ಭಾಷಾ ಎಚ್ಡಿಎಂ ಪುರಸಭೆ ಸದಸ್ಯರು ಹಾಗೂ ಮುಖಂಡರುಗಳು ವಿವಿಧ ವೃತ್ತಗಳಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ವಿಷಯದಲ್ಲಿ ಮಾತನಾಡಿದರು ಈ ಸಂದರ್ಭದಲ್ಲಿ ಪಕ್ಷದ ರಾಜ್ಯ ಅಧ್ಯಕ್ಷ ತಾಹಿರ್ ಹುಸೇನ್, ರಾಜ್ಯ ಉಪಾಧ್ಯಕ್ಷ ಶ್ರೀಕಾಂತ್ ಸಾಲಿಯಾನ್, ರಾಜ್ಯ ಖಜಾಂಚಿ ಸಲಾಂ ಮಂಗಳೂರು, ವಲಯ ಕಾರ್ಯದರ್ಶಿ ಇರ್ಫಾನ್ ಬೀದರ್, ರಾಯಚೂರು ಜಿಲ್ಲಾ ಅಧ್ಯಕ್ಷ ಶೇಕ್ ಫರೀದ್ ಉಮರಿ, ತಾಲೂಕು ಅಧ್ಯಕ್ಷ ಬಾಬಾ ಹುಸೇನ್ ಗಚ್ಚಿ, ನಾಸಿರ್ ಅಲಿ, ಎಂ ಎ ಎಚ್ ಮುಕೀಮ್, ನಗರದ ಮುಖಂಡರುಗಳಾದ ಸಯ್ಯದ್ ಅಕ್ಬರ್ ಪಾಷಾ ಜನಾದ್ ಅಬ್ದುಲ್ ಕರೀಂ ಖಾನ್ ಜಮಾತೆ ಇಸ್ಲಾಮಿ ಅಧ್ಯಕ್ಷ ಅಬ್ದುಲ್ ರಹಮಾನ್ ಮಹಮ್ಮದ್ ಹಾರುನ್, ಅಬ್ದುಲ್ ಹಮೀದ್, ಯೂನುಸ್ ನಾಯಕ್ ಸಾಬ್ ಮಹಮ್ಮದ್ ಇಸ್ಮಾಯಿಲ್ ಮಾಜಿ ಪುರಸಭೆ ಅಧ್ಯಕ್ಷರು, ಭಾಷಾ ಸಾಬ್ ಪುರಸಭೆ ಸದಸ್ಯರು, ಅಬ್ದುಲ್ ಕಯ್ಯೂಮ್, ಮಹೆಬೂಬ್ ಕುರೇಶಿ ಮಾಜಿ ಪುರಸಭೆ ಸದಸ್ಯರು, ಕಾಜಾ ಮೈನುದ್ದೀನ್, ಎಂ ಎಂ ಖಾನ್, ಫ್ರೂಟ್ ಮಹಿಬೂಬ್, ಅಹಮದ್ ಹುಸೇನ್ ಟೈಲರ್, ಚಾಂದ್ ಪಾಷಾ ಟೈಲರ್, ಬಾಗಲಕೋಟ್ ರಫಿ ಮತ್ತು ಹಬೀಬ್ಸಹರ, ಇಮ್ರಾನ್ ಖಾನ್ ಮತ್ತು ಇತರೆ ಸದಸ್ಯರು ಉಪಸ್ಥಿತರಿದ್ದರು.

# ಸ್ವಚ್ಛ ಹಸಿರು ರಾಯಚೂರಿಗಾಗಿ ಭರವಸೆಯ ಓಟ;ಪಾಲಿಕೆಯಿಂದ ವಿಶೇಷ ಕಾರ್ಯಕ್ರಮ

ವಿಜೇತರಿಗೆ ಪ್ರಶಸ್ತಿ ವಿತರಣೆ: 17ರಿಂದ 35ರ ವರ್ಷದವರೆಗಿನ ಯುವಕರು ಮತ್ತು ಮಹಿಳೆಯರಿಗಾಗಿ 5 ಕಿಲೋಮೀಟರ್ ಮ್ಯಾರಥಾನ್ ಸ್ಪರ್ಧೆಯು ನಗರದ ಅಂಬೇಡ್ಕರ್ ವೃತ್ತದಿಂದ ಸ್ಟೇಷನ್ ವೃತ್ತದವರೆಗೆ ಮತ್ತು ನವೀನ್ ಆಸ್ಪತ್ರೆಯಿಂದ ಮಹಾತ್ಮಗಾಂಧಿ ಕ್ರೀಡಾಂಗಣದವರೆಗೆ ಮಾರಥಾನ್ ಆಯೋಜಿಸಲಾಗಿದ್ದು, ಪ್ರಥಮ ಬಹುಮಾನವನ್ನು ಪುರುಷರ ವಿಭಾಗದಲ್ಲಿ ದೇವದುರ್ಗ ತಾಲೂಕಿನ ಜಾಲಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ನಿಂಗಣ್ಣ, ಮಹಿಳಾ ವಿಭಾಗದಲ್ಲಿ ದೇವಸೂಗೂರಿನ ಯಲ್ಲಮ್ಮ, ದ್ವಿತೀಯ ಬಹುಮಾನವನ್ನು ಪುರುಷರ ವಿಭಾಗದಲ್ಲಿ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ತಾಯಪ್ಪ, ಸರ್ಕಾರಿ ಮಹಿಳಾ ಕಾಲೇಜಿನ ವಿದ್ಯಾರ್ಥಿ ಭೂಮಿಕಾ, ತೃತೀಯ ಬಹುಮಾನವನ್ನು ರಾಯಚೂರಿನ ಸನ್‌ರೈಸ್ ಕಾಲೇಜಿನ ವಿದ್ಯಾರ್ಥಿ ತಿಮ್ಮಪ್ಪ, ಎಲ್‌ವಿಡಿ ಕಾಲೇಜಿನ ಶೃತಿ ಅವರಿಗೆ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಪಾಲಿಕೆಯ ಆರೋಗ್ಯಾಧಿಕಾರಿ ಡಾ.ಎಂ.ಡಿ.ಶಾಕೀರ್ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಿ: ಸುರೇಶ ವರ್ಮಾ

ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ.


ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಅರ್ಹ ಮತದಾರರಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಹಿನೂರ್ ಮಹಾವಿದ್ಯಾಲಯದಲ್ಲಿ ಮತದಾರರ ಜಾಗೃತಿ ಆಂದೋಲನ

**ಕಲಬುರಗಿ,ಅ.9–** ನಗರದ ರಾಮಮಂದಿರ ರಿಂಗ್ ರಸ್ತೆಯಲ್ಲಿರುವ ಕೊಹಿನೂರ್ ಪದವಿ ಮಹಾವಿದ್ಯಾಲಯದಲ್ಲಿ ನನ್ನ ಮತ ಮಾರಾಟಕ್ಕಿಲ್ಲ –ಮತದಾರರ ಜಾಗೃತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಸ್ಥಾಪಕ ರಮೇಶ ದುತ್ತರಗಿ ಮಾತನಾಡುತ್ತಾ,ಯುವಜನಾಂಗ ಮತದಾನದಿಂದ ವಿಮುಖರಾಗದೆ ಪ್ರತಿ ಚುನಾವಣೆಯಲ್ಲೂ ತಮ್ಮ ಹಕ್ಕನ್ನು ಜವಾಬ್ದಾರಿಯಿಂದ ಚಲಾಯಿಸಬೇಕು.ದೇಶ ಕಟ್ಟುವಲ್ಲಿ ಶಾಸಕಾಂಗ ಕಾರ್ಯಾಂಗ ನ್ಯಾಯಾಂಗ ಹಾಗೂ ಮಾಧ್ಯಮ ರಂಗಕ್ಕೆ ಎಷ್ಟು ಜವಾಬ್ದಾರಿ ಇದೆಯೋ ಸಾರ್ವಜನಿಕರಿಗೂ ಕೂಡ ಅಷ್ಟೇ ಜವಾಬ್ದಾರಿ ಇದೆ ಎಂಬುದನ್ನು ನಾವೆಲ್ಲ ತಿಳಿದುಕೊಳ್ಳಬೇಕು. ಕೇವಲ ಸರ್ಕಾರ ಹಾಗೂ ಅಧಿಕಾರಿಗಳ ಕಡೆಗೆ ಬೊಟ್ಟು ಮಾಡಿ ತೋರಿಸದೆ ನಮ್ಮ ಹಕ್ಕು ಮತ್ತು ಕರ್ತವ್ಯ ಹಾಗೂ ಜವಾಬ್ದಾರಿಯನ್ನು ಅರಿತುಕೊಳ್ಳಬೇಕು




ಅಂದಾಗ ಮಾತ್ರ ಬಲಿಷ್ಠವಾದ ದೇಶ ಕಟ್ಟಲಿಕ್ಕೆ ಸಾಧ್ಯ ಎಂದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಪ್ರೊ. ವಿ.ಎಂ. ಹಿರೇಮಠ ವಹಿಸಿದ್ದರು.ಉಪನ್ಯಾಸಕ ಚನ್ನಬಸವ.ಡಿ.ಎಚ್ ನಿರೂಪಿಸಿದರು.ಉಪನ್ಯಾಸಕ ನಿಖಿಲ್ ಕುಲಕರ್ಣಿ ಸ್ವಾಗತಿಸಿದರು. ಆಡಳಿತಾಧಿಕಾರಿ ಸಿದ್ದರಾಜ ಸೊ0ತಕರ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಸಾವನ.ವಿ. ಗುತ್ತೇದಾರ, ಸೌಮ್ಯ.ಎಂ.ಕೆ, ರವಿಕುಮಾರ.ಬಿ.ಪಾಟೀಲ ಇದ್ದರು.

# ಅರಕೇರಾ ತಾಲ್ಲೂಕಿನ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವಿಶೇಷ ಅಭಿಯಾನ: ಅಮರೇಶ ಬಿರಾದರ್

ಯುವ ಮಾರ್ಗ ಸುದ್ದಿ

**ಅರಕೇರಾ,ಅ.9–**ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ಪ್ರಗತಿ ಬಗ್ಗೆ ಪರಿಶೀಲನೆ ಸಭೆ ಜರುಗಿತು. ದಿನಾಂಕ 10–10–2025 ರಂದು ಸಾಮಾಜಿಕಮತ್ತು ಶೈಕ್ಷಣಿಕ ಸಮೀಕ್ಷೆಯ ವಿಶೇಷ ಅಭಿಯಾನವನ್ನು ಅರಕೇರಾ ತಾಲ್ಲೂಕಿನ ಎಲ್ಲಾ ಗ್ರಾಮಗಳ ಸರಕಾರಿ ಶಾಲೆಗಳಲ್ಲಿ ಆಯೋಜನೆ ಮಾಡಲಾಗಿದೆ ಎಂದು ಅರಕೇರಾ ತಹಶೀಲ್ದಾರ ಅಮರೇಶ ಬಿರಾದರ್ ಮಾಹಿತಿ ನೀಡಿದರು.

ಅರಕೇರಾ ಪಟ್ಟಣದ ತಹಶೀಲ್ದಾರ ಕಾರ್ಯಲಯ ಶೈಕ್ಷಣಿಕ ಸಮೀಕ್ಷೆ ವಿಶೇಷ ಅಭಿಯಾನದಲ್ಲಿ ಇದುವರಿಗೂ ಸಮೀಕ್ಷೆಗೆ ಒಳಪಡದ ಕುಟುಂಬಗಳ ಮುಖ್ಯಸ್ಥರು ತಮ್ಮ ದಾಖಲಾತಿಗಳೊಂದಿಗೆ ರೇಷನಕಾರ್ಡ ಹಾಗೂ ಕುಟುಂಬದ ಸದಸ್ಯರ ಆಧಾರ ಕಾರ್ಡ ದಾಖಲೆಗಳೊಂದಿಗೆ ಅರಕೇರಾ ತಾಲೂಕಿನ ಎಲ್ಲಾ ಗ್ರಾಮ,ದೊಡ್ಡಿ,ತಾಂಡ, ಹತ್ತಿರದ ಸರಕಾರಿ ಶಾಲೆಗಳಲ್ಲಿ



ಹಾಜರಾಗಿ ಸಮೀಕ್ಷೆಯಲ್ಲಿ ಪಾಲುಗೊಳ್ಳುವಂತೆ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂದರ್ಭದಲ್ಲಿ ಅಣ್ಣರಾವ್‌ನಾಯಕ ತಾಲೂಕು ಪಂಚಾಯತಿ ಕಾರ್ಯನಿರ್ವಹಣಧಿಕಾರಿಗಳು, ಶಿವರಾಜ ಪೂಜಾರಿ ಕ್ಷೇತ್ರ ಸಮನ್ವಯ ಅಧಿಕಾರಿಗಳು, ಪ್ರಗತಿ ಪರಿಸೀಲನೆ ಸಭೆಯಲ್ಲಿ ಭಾಗವಹಿಸಿದ್ದರು.

# ರಾಜಪ್ಪ ಹೊನ್ನಟಗಿಗೆ ಹಿರಿಯ ನಾಗರಿಕ ಸೇವಾ ಪ್ರಶಸ್ತಿ ಪ್ರಧಾನ

ಯುವ ಮಾರ್ಗ ಸುದ್ದಿ

**ಸಿರವಾರ,ಅ.9–**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳು ಇವರ ಸಂಯುಕ್ತಾಶ್ರಯದಲ್ಲಿ ರಾಯಚೂರಿನ ಕನ್ನಡ ಭವನದಲ್ಲಿ "ವಿಶ್ವ ಹಿರಿಯ ನಾಗರಿಕರ ದಿನಾಚರಣೆ 2025 "ರ ಪ್ರಯುಕ್ತ ಆಯೋಜಿಸಿದ್ದ ಹಿರಿಯ ನಾಗರಿಕ ಸೇವಾ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸಿರವಾರ ಪಟ್ಟಣದ ದಲಿತ ಸಂಘಟನೆಯ ಹಿರಿಯ ಹೋರಾಟಗಾರ, ಸಾಮಾಜಿಕ ಕಳಕಳಿಯ ನಾಯಕರಾದ ರಾಜಪ್ಪ ಹೊನ್ನಟಗಿಯವರಿಗೆ ರಾಯಚೂರು ನಗರ ಶಾಸಕರಾದ ಡಾ:ಎಸ್.ಶಿವರಾಜ ಪಾಟೀಲ್ ಅವರು ಪ್ರಶಸ್ತಿ ಪ್ರಧಾನ ಮಾಡಿದರು.



ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಗಜಾಜ ಬಾಳೆ, ಹಿರಿಯ ನಾಗರಿಕರ ಸಬಲೀಕರ ಇಲಾಖೆ, ಯುವನಜ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಅಧಿಕಾರಿಗಳು ಹಾಗೂ ಸಿರವಾರ ಮತ್ತು ಮಾನ್ವಿ ತಾಲೂಕುಗಳ ರಾಜಪ್ಪ ಹೊನ್ನಟಗಿ ಅವರ ಅಭಿಮಾನಿ ಬಳಗ ಇದ್ದರು.

# ಪ್ರತಿಯೊಬ್ಬರು ಕಣ್ಣಿನ ಆರೋಗ್ಯದ ಬಗ್ಗೆ ಕಾಳಜಿ, ಮುಂಜಾಗ್ರತೆ ವಹಿಸಿ

**ಕಲಬುರಗಿ, ಅ.9–**ಇತ್ತೀಚಿನ ದಿನಗಳಲ್ಲಿ ಅತಿಯಾದ ಮೊಬೈಲ್ ಮತ್ತು ಕಂಪ್ಯೂಟರ್ ಬಳಕೆಯಿಂದ ಕಣ್ಣಿನ ದೃಷ್ಟಿಯ ಮೇಲೆ ಪರಿಣಾಮ ಬೀರುತ್ತಿದೆ. ಇದರಿಂದ ಕಣ್ಣಿನ ಪೊರೆ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ ಸೇರಿದಂತೆ ಇತರ ದೀರ್ಘಕಾಲದ ಕಣ್ಣಿನ ಅಸ್ವಸ್ಥತೆಗಳು ಹೆಚ್ಚಾಗುತ್ತಿದೆ. ಆದ್ದರಿಂದ ಇವುಗಳ ಬಳಕೆ ಮಿತಗೊಳಿಸಬೇಕು. ಪ್ರತಿಯೊಬ್ಬರು ಕಣ್ಣಿನ ಆರೋಗ್ಯ ಬಗ್ಗೆ ಕಾಳಜಿ, ಮುಂಜಾಗ್ರತೆ ವಹಿಸಬೇಕು ಎಂದು ನೇತ್ರಾಧಿಕಾರಿ ಡಾ.ದಸ್ತಗಿರ್ ಸಲಹೆ ನೀಡಿದರು. ನಗರದ ಆಳಂದ ರಸ್ತೆಯ ಜೆ.ಆರ್ ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "28ನೇ ವಿಶ್ವ ದೃಷ್ಟಿ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಪೌಷ್ಟಿಕಾಂಶವಳ್ಳ ಸಮತೋಲಿತ ಆಹಾರ, ನಿಯಮಿತ ಕಣ್ಣಿನ ಪರೀಕ್ಷೆ, ಪ್ರತಿ 20 ನಿಮಿಷಗಳಿಗೊಮ್ಮೆ ಕಣ್ಣಿಗೆ ಸ್ವಲ್ಪ ವಿಶ್ರಾಂತಿ, ಧೂಮಪಾನ ತ್ಯಜಿಸುವುದು, ಸೂಕ್ತ ಕಣ್ಣಿನ ಸುರಕ್ಷಾ ಕ್ರಮಗಳನ್ನು ಅಳವಡಿಸಿಕೊಳ್ಳುವುದು, ವಿಟಾಮಿನ್–ಎ ಸೇವನೆ, ಕಣ್ಣಿನ ಸ್ವಚ್ಛತೆ ಕಾಪಾಡುವುದು ಸೇರಿದಂತೆ ಮುಂತಾದ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ಅನೇಕ ಸಲಹೆ–ಸೂಚನೆಗಳನ್ನು ನೀಡಿದರು.

# ಶುಶ್ರೂಷಕರ ವಿದೇಶಿ ಭಾಷಾ ತರಬೇತಿಗೆ ಹೆಸರು ನೋಂದಾಯಿಸಿಕೊಳ್ಳಲು ಸೂಚನೆ

**ರಾಯಚೂರು,ಅ.9–**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ (ಕೆವಿಟಿಎಸ್ ಡಿಸಿ) ವತಿಯಿಂದ ಶುಶ್ರೂಷಕ ವೃತ್ತಿಪರರಿಗಾಗಿ ಪ್ರಾರಂಭಿಸಿರುವ ನೂತನ ಕಾರ್ಯಕ್ರಮ ಶುಶ್ರೂಷಕರ ವಿದೇಶೀ ಭಾಷಾ ತರಬೇತಿಗೆ ಆಸಕ್ತ ಅಭ್ಯರ್ಥಿಗಳು ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

ವಿದೇಶದಲ್ಲಿ ಉದ್ಯೋಗಾಸಕ್ತಿ ಹೊಂದಿರುವ ಎಲ್ಲಾ ಶುಶ್ರೂಷಕರು ಈ ಕಾರ್ಯಕ್ರಮದ ಮೂಲಕ ಜರ್ಮನ್, ಜಪಾನೀಸ್, ಇಂಗ್ಲೀಷ್ ಮತ್ತು ಇತರ ವಿದೇಶೀ ಭಾಷೆಗಳನ್ನು ಕಲಿತು ತಮ್ಮ ಸಾಗರೋತ್ತರ ಉದ್ಯೋಗಾಕಾಂಕ್ಷೆಗಳನ್ನು ಸಾಕಾರಗೊಳಿಸಿಕೊಳ್ಳಬಹುದಾಗಿದೆ.

ವಿದೇಶದಲ್ಲಿ ಉದ್ಯೋಗಾಸಕ್ತಿ ಹೊಂದಿರುವ ಎಲ್ಲಾ ಶುಶ್ರೂಷಕರಿಗೆ ವಿದೇಶಿ ಭಾಷಾ ತರಬೇತಿಗಳು, ನರ್ಸಿಂಗ್ ಸಂಬಂಧಿತ ವಿಶೇಷ ಪರೀಕ್ಷೆ/ಕೋರ್ಸ್ ಗಳಿಗೆ ಮಾರ್ಗದರ್ಶನ, ವಿಷಯ ತಜ್ಞರಿಂದ ಮಾರ್ಗದರ್ಶನ, ವಿದೇಶದಲ್ಲಿ ವೃತ್ತಿ ಪರವಾನಗಿ ಮತ್ತು ಅರ್ಜಿ ಸಲ್ಲಿಕೆಗೆ ಬೆಂಬಲ, ವಿದೇಶಿ ಉದ್ಯೋಗದಾತರೊಂದಿಗೆ ಸಂದರ್ಶನ ಹಾಗೂ ಒಂದೇ ವೇದಿಕೆಯಲ್ಲಿ ಅನಂತ ಅವಕಾಶಗಳನ್ನು ಸಂಪೂರ್ಣ ಉಚಿತವಾಗಿ ಕಲ್ಪಿಸಲಾಗಿದೆ.

ಆಸಕ್ತಿಯುಳ್ಳ ಆಕಾಂಕ್ಷಿಗಳು ತರಬೇತಿಯಲ್ಲಿ ಭಾಗವಹಿಸುವ ಸಲುವಾಗಿ ವೆಬ್‌ಸೈಟ್: https://nursesflt.ksdckarnataka.come ಲಿಂಕ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 7338674796ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯ ಮಿಷನ್‌ನ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಜಿ.ಯು. ಹುಡೇದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಯುವಜನೋತ್ಸವ: ಅಕ್ಟೋಬರ್ 17ರಂದು ಆಯ್ಕೆ ಪ್ರಕ್ರಿಯೆ

**ರಾಯಚೂರು,ಅ.9–**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2025–26ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆಯನ್ನು ಅಕ್ಟೋಬರ್ 17ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ತಾಲೂಕುಗಳ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳು, ಯುವಕ/ ಯುವತಿ ಮಂಡಳಿಗಳು ಸೇರಿದಂತೆ ಇನ್ನಿತರೆ ಸಂಸ್ಥೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ ಅವರು ತಿಳಿಸಿದ್ದಾರೆ.


ನಿಗದಿಪಡಿಸಿದ ದಿನಾಂಕ ಹಾಗೂ ಸ್ಥಳದಲ್ಲಿ ಬೆಳಿಗ್ಗೆ 9 ಗಂಟೆಯ ಒಳಗಾಗಿ ಸ್ಪರ್ಧಾಳುಗಳು ತಮ್ಮ ಹೆಸರನ್ನು ನೋದಾಯಿಸಕೊಳ್ಳತಕ್ಕದ್ದು. ವಯಸ್ಸಿನ ದೃಢೀಕರಣಕ್ಕೆ ಆಧಾರ ಕಾರ್ಡ್ ಅಥವಾ ಜನ್ಮ ದಿನಾಂಕ ಇರುವ ಸರಕಾರಿ ಪ್ರಮಾಣ ಪತ್ರವನ್ನು ಹಾಗೂ ಸ್ವಯಂ ಬ್ಯಾಂಕ್ ಖಾತೆಯ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಬಹುದಾಗಿದೆ.

ಸಾಂಸ್ಕೃತಿಕ ವಿಭಾಗದಲ್ಲಿ ಜಾನಪದ ನೃತ್ಯ (ತಂಡ) 10 ಜನ ಭಾಗವಹಿಸಬಹುದಾಗಿದೆ. 15 ನಿಮಿಷಗಳನ್ನು ಸ್ಪರ್ಧಾ ಸಮಯವನ್ನು ನಿಗದಿಪಡಿಸಲಾಗಿದೆ. ಜನಪದ ಗೀತೆ (ತಂಡ) ಪ್ರಾದೇಶಿಕ ಭಾಷೆಯಲ್ಲಿ 10 ಜನ ಭಾಗವಹಿಸಬಹುದಾಗಿದೆ. 07 ನಿಮಿಷಗಳನ್ನು ಸ್ಪರ್ಧಾ ಸಮಯವನ್ನು ನಿಗದಿಪಡಿಸಲಾಗಿದೆ. ಕಥೆ ಬರೆಯುವುದು (ವೈಯಕ್ತಿಕ) (1000 ಪದಗಳಿಗೆ ಮೀರದಂತೆ) ಹಿಂದಿ/ಆಂಗ್ಲ / ಪ್ರಾದೇಶಿಕ ಭಾಷೆಗೆ 60 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಚಿತ್ರಕಲೆ (ವೈಯಕ್ತಿಕ) 11.7"ಥ16.5" 90 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಭಾಷಣಕ್ಕೆ (ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಇರಬೇಕು) 07 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಕವಿತೆ ಬರೆಯುವುದು (ವೈಯಕ್ತಿಕ) ಹಿಂದಿ /ಆಂಗ್ಲ / ಪ್ರಾದೇಶಿಕ ಭಾಷೆಯಲ್ಲಿ ಇರಬೇಕು. 90 ನಿಮಿಷಗಳನ್ನು ನಿಗದಿಪಡಿಸಲಾಗಿದ್ದು, ಸ್ಪರ್ಧಾಳುಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾಧಿಕಾರಿಗಳು, ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ತುರ್ತು ಪರಿಸ್ಥಿತಿಯಲ್ಲಿ ಮನಸ್ಸಿನ ಸ್ವಾಸ್ಥ್ಯತೆ ಅಗತ್ಯ"

ಪ್ರತಿ ವರ್ಷ ಅಕ್ಟೋಬರ್ 10 ರಂದು ಜಗತ್ತಿನಾದ್ಯಂತ ವಿಶ್ವ ಮಾನಸಿಕ ಆರೋಗ್ಯ ದಿನವನ್ನು ಆಚರಿಸಲಾಗುತ್ತಿದೆ. ಈ ಬಾರಿ 2025 ನೇ ಸಾಲಿನ ಆಚರಣೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಘೋಷಿಸಿರುವ ವಿಷಯವೇನೆಂದರೆ "ಮಾನವೀಯ ತುರ್ತು ಪರಿಸ್ಥಿತಿಗಳಲ್ಲಿ ಮಾನಸಿಕ ಆರೋಗ್ಯ".




ಮಾನಸಿಕ ಆರೋಗ್ಯ ಎಂದರೆ ಕೇವಲ ಮಾನಸಿಕ ಅಸ್ವಸ್ಥತೆ ಇಲ್ಲದಿರುವುದಷ್ಟೇ ಅಲ್ಲ, ಅದು ವ್ಯಕ್ತಿಯ ಸಂಪೂರ್ಣ ಮಾನಸಿಕ, ದೈಹಿಕ ಮತ್ತು ಸಾಮಾಜಿಕ ಕ್ಷೇಮದ ಪ್ರತಿಬಿಂಬ. ಒತ್ತಡ, ಸಂಕಷ್ಟ, ನಷ್ಟ, ಮತ್ತು ನೋವುಗಳ ನಡುವೆಯೂ ಬದಕನ್ನು ಸಮತೋಲನಗೊಳಿಸುವ ಸಾಮರ್ಥ್ಯವನ್ನೇ ಮಾನಸಿಕ ಆರೋಗ್ಯವೆಂದು ಹೇಳಬಹುದು. ನಾವು ಪ್ರತಿ ದಿನ ಶಾರೀರಿಕ ಆರೋಗ್ಯಕ್ಕಾಗಿ ಸಮಯ, ಹಣ, ಮತ್ತು ಶ್ರಮ ಹೂಡುತ್ತೇವೆ. ಆದರೆ ಅದೇಮಟ್ಟದಲ್ಲಿ ಮಾನಸಿಕ ಆರೋಗ್ಯವನ್ನು ಕಡೆಗಣಿಸುತ್ತೇವೆ. ವಾಸ್ತವವಾಗಿ ಮನಸ್ಸು ಆರೋಗ್ಯವಾಗಿದ್ದರೆ ದೇಹವೂ ಆರೋಗ್ಯವಾಗಿರಲು ಸುಲಭ. ಇನ್ನು ತುರ್ತು ಪರಿಸ್ಥಿತಿ ಸಂಧರ್ಭದಗಳಲ್ಲಿ ಮಾನಸಿಕ ಆರೋಗ್ಯದ ಸಮಸ್ಯೆಗಳ ಬಗ್ಗೆ ಅವಲೋಕಿಸುವದಾದರೆ ಇಂದಿನ ಜಗತ್ತು ಹಲವಾರು ಸಂಕಷ್ಟಗಳನ್ನು ಎದುರಿಸುತ್ತಿದೆ.

ಉದಾಹರಣೆಗೆ ನೈಸರ್ಗಿಕ ವಿಪತ್ತುಗಳು: ಭೂಕಂಪ, ಪ್ರವಾಹ, ಬರಹ ಚಂಡಮಾರುತ ಇತ್ಯಾದಿ. ಮಾನವೀಯ ಸಂಕಷ್ಟಗಳು: ಯುದ್ಧ, ಸಂಘರ್ಷ, ಸ್ಥಳಾಂತರ ಇತ್ಯಾದಿ. ಸಾರ್ವಜನಿಕ ಆರೋಗ್ಯ ತುರ್ತುಗಳು: ಕೋವೀಡ್–19 ಸಾಂಕ್ರಾಮಿಕ ರೋಗದಂತಹ ಸನ್ನಿವೇಶಗಳು. ಇಂತಹ ಮೇಲಿನ ಸಂದರ್ಭಗಳಲ್ಲಿ ಸಾರ್ವಜನಿಕರು ಮನೆಯನ್ನು, ಕುಟುಂಬವನ್ನು, ಜೀವನೋಪಾಯವನ್ನು ಅಲ್ಲದೇ ಭವಿಷ್ಯದ ಭರವಸೆಯನ್ನು ಕಳೆದುಕೊಳ್ಳುವುದರಿಂದ, ಅನೇಕರು ಮಾನಸಿಕ ಆಘಾತ, ನಿರಾಶೆ, ಆತಂಕ, ನಿದ್ರಾಹೀನತೆ, ದುಖಃ ಕೋಪಗಳನ್ನು ಅನುಭವಿಸುತ್ತಾರೆ. ಕೆಲವರು ಮದ್ಯ ಮತ್ತು ಮಾದಕ ವಸ್ತುಗಳ ಬಳಕೆಗೆ ತಿರುಗುತ್ತಾರೆ. ಅಲ್ಲದೇ ಆತ್ಮಹತ್ಯೆಯ ಅಪಾಯವೂ ಹೆಚ್ಚಾಗುತ್ತದೆ.

ಇಂತಹ ಸಂದರ್ಭಗಳಲ್ಲಿ ದೈಹಿಕ ಆರೋಗ್ಯ ಸೇವೆಗಳಷ್ಟೇ ಅಲ್ಲ. ಮಾನಸಿಕ ಆರೋಗ್ಯ ಸೇವೆಗಳು ಅತ್ಯಂತ ಮುಖ್ಯ.ಆದರೆ ದುರದುಷ್ಟಾವಶಾತ್, ಸಮಾಜದಲ್ಲಿ ಇನ್ನೂ ಮಾನಸಿಕ ಅಸ್ವಸ್ಥತೆಗೆ ಸಂಭಂದಿಸಿದ ಕಳಂಕವಿದೆ."ಮಾನಸಿಕ ಅಸ್ವಸ್ಥ" ಎಂದು ಒಬ್ಬನಿಗೆ ಮುದ್ರೆ ಅಂಟಿಸಿದರೆ, ಆತನು ನೆರವು ಕೇಳಲು ಹೆದರುತ್ತಾನೆ. ವಿಶ್ವ ಮಾನಸಿಕ ಆರೋಗ್ಯ ದಿನದ ಆಚರಣೆಯ ಉದ್ದೇಶವೇ ಈ ಕಳಂಕವನ್ನು ಕಡಿಮೆಮಾಡಿ, ಪ್ರತಿಯೊಬ್ಬರಿಗೂ ಮಾನಸಿಕ ಆರೋಗ್ಯ ಸೇವೆಗಳು ಸುಲಭವಾಗಿ ಲಭ್ಯವಾಗುವಂತೆ ಮಾಡುವುದು.

ಸರ್ಕಾರ ಮತ್ತು ಸಮಾಜದ ಪಾತ್ರ: ಸರ್ಕಾರವು ಮಾನಸಿಕ ಆರೋಗ್ಯ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಪ್ರಾಥಾಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿಯೇ ಮಾನಸಿಕ ಆರೋಗ್ಯ ಸೇವೆಗಳನ್ನು ಒದಗಿಸಲು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮೂಲಕ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಿದೆ. ತುರ್ತು ಪರಿಸ್ಥಿತಿಗಳಿಗೆ ತಕ್ಕಂತೆ ತುರ್ತು ಮಾನಸಿಕ ಆರೈಕೆ ಯೋಜನೆ ರೂಪಿಸುತ್ತಿದೆ. ಶಾಲಾ–ಕಾಲೇಜುಗಳಲ್ಲಿ ಜೀವನ ಕೌಶಲ್ಯ ಶಿಕ್ಷಣ, ಒತ್ತಡ ನಿರ್ವಹಣಾ ತರಬೇತಿಯನ್ನು ನೀಡಲಾಗುತ್ತಿದೆ.ಅದರಂತೆ ಪತ್ರಿಕಾ ವಿದ್ಯುನ್ಮಾನ ಮಾಧ್ಯಮಗಳು ಸಹ ಸರಿಯಾದ ಮಾಹಿತಿಯನ್ನು ಹಂಚಿಕೊಂಡು ಜನರಲ್ಲಿ ಅರಿವು ಮತ್ತು ಸ್ವೀಕಾರವನ್ನು ಬೆಳೆಸಬೇಕು.

ವೈಯಕ್ತಿಕವಾಗಿ ನಮ್ಮ–ನಿಮ್ಮೆಲ್ಲರ ಹೊಣೆಗಾರಿಕೆ: ಸಂಕಷ್ಟದಲ್ಲಿರುವ ವ್ಯಕ್ತಿಗಳಿಗೆ ಸಹಾನುಭೂತಿ ಮತ್ತು ಬೆಂಬಲ ನೀಡಬೇಕು. ತೊಂದರೆ ಅನುಭವಿಸುತ್ತಿರುವವರು ಸಹಾಯ ಕೇಳಲು ಹೆದರಬಾರದು. ಕುಟುಂಬ,ಸ್ನೇಹಿತರು ಪರಸ್ಪರ ಮನೋಭಾವ ಆಧಾರವಾಗಿ ನಿಲ್ಲಬೇಕು. ಸ್ವಯಂ ಸೇವಾ ಸಂಘಟನೆಗಳು ಸಮುದಾಯ ಮಟ್ಟದಲ್ಲಿ ಮಾನಸಿಕ ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಪ್ರತಿಯೊಬ್ಬರು ತಮ್ಮ ಮಾನಸಿಕ ಆರೋಗ್ಯದ ಆರೈಕೆ ಬಗ್ಗೆ ಗಮನಕೊಡುವುದು ಅತೀ ಮುಖ್ಯ. 'ಮಾನವೀಯ ತುರ್ತು ಪರಿಸ್ಥಿತಿಗಳಲ್ಲಿಯೂ ಸಹಾನುಭೂತಿ, ಬೆಂಬಲ ಮತ್ತು ಮಾನಸಿಕ ಆರೋಗ್ಯ ಅಗತ್ಯ. ಮಾನಸಿಕ ಆರೋಗ್ಯವನ್ನು ಕಾಪಾಡುವುದು ಮಾನವೀಯ ಕರ್ತವ್ಯವಾಗಿದೆ.

**ಲೇಖಕರು:**

**ಡಾ.ನಂದಿತಾ.ಎಂ.ಎನ್.**

**ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ರಾಯಚೂರು**

**ಡಾ.ಮನೋಹರ.ವೈ.ಪತ್ತಾರ**

**ಹಿರಿಯ ಮನೋವೈದ್ಯರು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ರಾಯಚೂರು**

## ರಾಮಾಯಣ ಒಂದು ಸಾರ್ವತ್ರಿಕ ಗ್ರಂಥ: ಬಟ್ಟು ಸತ್ಯನಾರಾಯಣ



**ಕಲಬುರಗಿ,ಅ.9–** ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು.

ಸಭೆಯನ್ನು ಉದ್ಧೇಶಿಸಿ ಕುಲಪತಿ, ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡುತ್ತಾ, ಮಹರ್ಷಿ ವಾಲ್ಮೀಕಿ ಅವರು ಮಾನವ ಸಂಬಂಧಗಳ ಮೌಲ್ಯ, ತಂದೆ–ಮಗನ ಸಂಬಂಧ ಮತ್ತು ಪ್ರಕೃತಿಯ ಮೇಲಿನ ಪ್ರೀತಿ ಇತ್ಯಾದಿಗಳನ್ನು ಮನುಕುಲಕ್ಕೆ ಕಲಿಸಿದರು. ರಾಮಾಯಣವು ಒಂದು ಸಾರ್ವತ್ರಿಕ ಗ್ರಂಥವಾಗಿದೆಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ಡಾ. ಶ್ಯಾಮಲಾ ಆರ್. ಮಾತನಾಡುತ್ತಾ, ರಾಮಾಯಣವು ಒಳ್ಳೆಯದು ಮತ್ತು ಕೆಟ್ಟದ್ದರ ಸರಳ ಕಥೆಯಲ್ಲ. ಇದು ಧರ್ಮದ ಅಧ್ಯಯನ ಜೀವನವನ್ನು ಆಳುವ ಸದಾಚಾರದ ತತ್ವ. ರಾಮಾಯಣವು ರಾಮ, ಸೀತೆ ಮತ್ತು ರಾವಣರ ಕಥೆ ಮಾತ್ರವಲ್ಲ. ಇದು ಮಾನವರ ನಡುವೆ, ಮನುಷ್ಯರು ಮತ್ತು ಪ್ರಕೃತಿಯ ನಡುವೆ ಮತ್ತು ಮಾನವೀಯತೆ ಮತ್ತು ದೈವತ್ವದ ನಡುವಿನ ಸಂಬಂಧಗಳ ಕಥೆಯೂ ಆಗಿದೆ. ಇದು ಕರ್ತವ್ಯ (ಧರ್ಮ), ಕರುಣೆ, ನ್ಯಾಯ, ತ್ಯಾಗ ಮತ್ತು ಸತ್ಯದ ವಿಷಯಗಳನ್ನು ಎಲ್ಲಾ ಸಮಾಜಗಳಿಗೆ ಮೂಲಭೂತವಾಗಿ ಉಳಿದಿರುವ ಮೌಲ್ಯಗಳನ್ನು ಪರಿಶೋಧಿಸುತ್ತದೆ. ವಾಲ್ಮೀಕಿಯ ರಾಮಾಯಣವು ಭಾರತದ ಗಡಿಗಳನ್ನು ಮೀರಿ ಹರಡಿತು, ಅದರ ಮೂಲ ಸಂದೇಶವನ್ನು ಉಳಿಸಿಕೊಂಡು ಸ್ಥಳೀಯ ಸಂಸ್ಕೃತಿಗಳು ಮತ್ತು ಭಾಷೆಗಳಿಗೆ ಹೊಂದಿಕೊಳ್ಳುತ್ತದೆ. ಎಂದು ಹೇಳಿದರು.

ಕುಲಸಚಿವ ಪ್ರೋ. ಆರ್ ಆರ್ ಬಿರಾದರ, ಮಾತನಾಡುತ್ತಾ, ವಾಲ್ಮೀಕಿ ಒಬ್ಬ ಮಹಾನ್ ಋಷಿ, ಅವರು ನಮಗೆ ಜೀವನವನ್ನು ಅರ್ಥಮಾಡಿಕೊಳ್ಳುವದನ್ನು ತೋರಿಸಿದರು. ಅವರ ಸ್ಮರಣೀಯ ಕೃತಿಯಾದ ರಾಮಾಯಣವು ಸಾಮರಸ್ಯ, ಸದಾಚಾರ ಮತ್ತು ಮಾನವೀಯ ಮೌಲ್ಯಗಳ ಅಸ್ತಿತ್ವದ ಉದಾಹರಣೆಯಾಗಿದೆ. ರಾಮಾಯಣವನ್ನು ವಿಕ್ಷಿತ್ ಭಾರತ –2047 ರಲ್ಲಿ ಅಳವಡಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕರಾದ ಡಾ. ಸಂಗಮೇಶ ಸ್ವಾಗತಿಸಿದರು. ಡಾ. ಜಯದೇವಿ ಜಂಗಮಶೆಟ್ಟಿ ಮತ್ತು ಡಾ. ಸ್ವಪ್ನಿಲ ಚಾಪೇಕರ್ ವಂದೇ ಮಾತರಂ ಮತ್ತು ರಾಷ್ಟ್ರಗೀತೆಯನ್ನು ಹಾಡಿದರು. ಅಷ್ಟಾ ಧನ್ಯವಾದಗಳನ್ನು ಅರ್ಪಿಸಿದರು. ಸೌಜನ್ಯ ಕಾರ್ಯಕ್ರಮವನ್ನು ನಿರೂಪಿಸಿದರು. ಹಣಕಾಸು ಅಧಿಕಾರಿ ರಾಮದೊರೈ, ಪ್ರೊ. ಡೋಣೂರ, ಪ್ರೊ. ಪಾಂಡುರಂಗ, ಪ್ರೊ. ಕಸಬೇಗೌಡ, ಪ್ರೊ. ಪಸೋಡಿ, ಡಾ. ರೇಣುಕಾ, ಡೀಗಳು, ಮುಖ್ಯಸ್ಥರು, ಸಂಯೋಜಕರು, ಸಂಶೋಧನಾರ್ಥಿಗಳು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಿರಪ್ ಕಂಪನಿ ಮಾಲೀಕನ ಬಂಧನ



**ಚೆನ್ನೈ,ಅ.9–** ಮಕ್ಕಳ ಸಾವಿಗೆ ಕಾರಣವಾಗಿದ್ದ ಕೆಮ್ಮಿ ಸಿರಪ್ ತಯಾರಿಕಾ ಕಂಪನಿಯ ಮಾಲೀಕನನ್ನು ಪೊಲೀಸರು ಕೊನೆಗೂ ಬಂಧಿಸಿದ್ದಾರೆ.

ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ ಕನಿಷ್ಠ 21 ಮಕ್ಕಳು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿರಪ್ ತಯಾರಿಸಿದ ಕಂಪನಿ ಸ್ರೆಸನ್ ಫಾರ್ಮಾಸ್ಯುಟಿಕಲ್ಸ್‌ನ ಮಾಲೀಕ ಎಸ್.ರಂಗನಾಥನ್ ಅವರನ್ನು ಮಧ್ಯಪ್ರದೇಶ ಪೊಲೀಸರು ಚೆನ್ನೈನಲ್ಲಿ ಸಂಬಂಧಿಸಿದ್ದಾರೆ.ಮಧ್ಯಪ್ರದೇಶ ಮತ್ತು ತಮಿಳುನಾಡು ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ರಂಗನಾಥನ್ ಅವರನ್ನು ಚೆನ್ನೈನಲ್ಲಿ ಬಂಧಿಸಲಾಗಿದೆ. ಈತನನ್ನು ವಶಕ್ಕೆ ಪಡೆದಿರುವ ಮಧ್ಯಪ್ರದೇಶದ ಪೊಲೀಸರು ವಿಚಾರಣೆ ನಡೆಸಿದ್ದಾರೆ. ರಾಜ್ಯದಲ್ಲಿ ವಿಷಕಾರಿ ಸಿರಪ್ ಸೇವಿಸಿ ಸಾವನ್ನಪ್ಪಿದ ಕನಿಷ್ಠ 21 ಮಕ್ಕಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಧ್ಯಪ್ರದೇಶದ ಪೊಲೀಸರು ಕಂಪನಿ ಮಾಲೀಕ ರಂಗನಾಥನ್ ಅವರಿಗಾಗಿ ಶೋಧ ನಡೆಸಿದ್ದರು ಅಲ್ಲದೆ ಅವರ ಸುಳಿವುಕೊಟ್ಟವರಿಗೆ 20,000 ರೂ. ಬಹುಮಾನವನ್ನು ಘೋಷಿಸಿದ್ದರು.

ಮಧ್ಯಪ್ರದೇಶದ ಹೊರತಾಗಿ, ರಾಜಸ್ಥಾನದಲ್ಲೂ ಈ ಸಿರಪ್ ಸೇವಿಸಿ ಕೆಲ ಮಕ್ಕಳು ಸಾವನ್ನಪ್ಪಿದರು. ಜೊತೆಗೆ ಮಕ್ಕಳಿಗೆ ಮೂತ್ರಪಿಂಡದ ಸೋಂಕು ಉಂಟಾಗಿ ಹಲವು ಮಕ್ಕಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಕೋಲ್ಡ್ರಿಫ್ ಎಂಬುದು ಮಕ್ಕಳಲ್ಲಿ ಶೀತ ಮತ್ತು ಕೆಮ್ಮಿನ ಲಕ್ಷಣಗಳನ್ನು ನಿವಾರಿಸಲು ಸೂಚಿಸಲಾದ ಔಷಧಿಯಾಗಿದೆ, ಉದಾಹರಣೆಗೆ ಮೂಗು ಸೋರುವುದು, ಸೀನುವುದು, ಗಂಟಲು ನೋವು ಮತ್ತು ಕಣ್ಣುಗಳಲ್ಲಿ ನೀರು ಬರುವುದು ಈ ರೀತಿಯ ಕಾಯಿಲೆಗಳಿಗೆ ಶಿಫಾರಸ್ಸು ಮಾಡಲಾಗುತ್ತಿದೆ.ಈ ತಿಂಗಳ ಆರಂಭದಲ್ಲಿ, ಸಿರಪ್ ಅನ್ನು ಪರೀಕ್ಷೆಗೆ ಒಳಪಡಿಸಿ ವಿಷಕಾರಿ ಮತ್ತು ಹಾನಿಕಾರಕ ರಾಸಾಯನಿಕ ಡೈಥಿಲೀನ್ ಗ್ಲೈಕಾಲ್ ಇರುವಿಕೆಯನ್ನು ತಮಿಳುನಾಡು ಅಧಿಕಾರಿಗಳು ಪತ್ತೆ ಮಾಡಿ ಸಿರಪ್ ಅನ್ನು ಕಲಬೆರಕೆ ಎಂದು ಘೋಷಿಸಿದ್ದರು, ಭಾರತದ ಉನ್ನತ ಔಷಧ ನಿಯಂತ್ರಕ ಔಷಧೀಯ ಉತ್ಪಾದನಾ ಪದ್ಧತಿಗಳಲ್ಲಿ ಗಂಭೀರ ಲೋಪ ಒಪ್ಪಿಕೊಂಡಿದೆ. ಹಲವಾರು ಕಾರ್ಖಾನೆಗಳ ತಪಾಸಣೆಯಲ್ಲಿ ಕಂಪನಿಗಳು ಅಗತ್ಯಕ್ಕೆ ಅನುಸಾರವಾಗಿ ಪ್ರತಿಯೊಂದು ಬ್ಯಾಚ್ ಕಚ್ಚಾ ವಸ್ತುಗಳು ಮತ್ತು ಸಕ್ರಿಯ ಪದಾರ್ಥಗಳನ್ನು ಪರೀಕ್ಷಿಸುತ್ತಿಲ್ಲ ಎಂದು ಕಂಡುಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ

**ಮೃತರ ಸಂಖ್ಯೆ 21ಕ್ಕೆ ಏರಿಕೆ–**ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ ಮಧ್ಯಪ್ರದೇಶದಲ್ಲಿ ಮೃತಪಟ್ಟ ಮಕ್ಕಳ ಸಂಖ್ಯೆ 21ಕ್ಕೆ ಏರಿಕೆಯಾಗಿದೆ, ಜೊತೆಗೆ ಸಿರಪ್ ಸೇವಿಸಿ ಹಲವು ಮಕ್ಕಳು ಅಸ್ವಸ್ಥರಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ರಾಜಸ್ತಾನದಲ್ಲಿಯೂ ಸಿರಪ್ ಸೇವಿಸಿ ಹಲವು ಮಕ್ಕಳು ಸಾವನ್ನಪ್ಪಿದ್ದಾರೆ. ಈ ಎಲ್ಲಾ ಬೆಳವಣಿಗೆ ಹಿನ್ನೆಲೆಯಲ್ಲಿ ಸಿರಪ್ ನಿಷೇಧಿಸಲಾಗಿದೆ.

**ಔಷಧ ಕಂಪನಿ ಶಾಶ್ವತ ಬಂದ್–**ಮಧ್ಯಪ್ರದೇಶ ಮತ್ತು ರಾಜಸ್ತಾನದಲ್ಲಿ ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ 21ಕ್ಕೂ ಅಧಿಕ ಮಕ್ಕಳು ಸಾವನ್ನಪ್ಪಿಸಿದ ಹಿನ್ನೆಲೆಯಲ್ಲಿ ಔಷಧಿ ತಯಾರಕರಾದ ಸ್ರೇಸನ್ ಫಾರ್ಮಾಸ್ಯುಟಿಕಲ್ಸ್‌ನ ಮಾಲೀಕ ರಂಗನಾಥನ್ ಬಂಧಿಸಿದ ಬೆನ್ನಲ್ಲೇ ಔಷಧ ಕಂಪನಿಯನ್ನು ಶಾಶ್ವತವಾಗಿ ಮುಚ್ಚಿ ಆದೇಶಿಸಲಾಗಿದೆ.ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ಕನಿಷ್ಠ 21 ಮಕ್ಕಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಲೀಕನ ಬಂಧನದ ಬೆನ್ನಲ್ಲೇ ಸಿರಪ್‌ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಿಷಕಾರಿ ಕೈಗಾರಿಕಾ ರಾಸಾಯನಿಕ ಡೈಥಿಲೀನ್ ಗ್ಲೈಕೋಲ್ ಇರುವುದು ಕಂಡುಬಂದ ನಂತರ. ಕಂಪನಿಯನ್ನು ಶಾಶ್ವತವಾಗಿ ಮುಚ್ಚಲಾಗಿದೆ.

ಪ್ರಾಥಮಿಕ ತನಿಖೆಯಲ್ಲಿ ಮಧ್ಯಪ್ರದೇಶ ಹೊರತುಪಡಿಸಿ ಒಡಿಶಾ ಮತ್ತು ಪುದುಚೇರಿಗೆ ಕೆಮ್ಮಿನ ಸಿರಪ್ ಸರಬರಾಜು ಮಾಡಲಾಗಿದೆ ಎಂದು ತಿಳಿದುಬಂದಿದೆ.ಕಾಂಚೀಪುರಂನಲ್ಲಿರುವ ಔಷಧ ಕಂಪನಿಯ ಕಾರ್ಖಾನೆಯಲ್ಲಿ, ಕೋಲ್ಡ್ರಿಫ್ ಸಿರಪ್ ತಯಾರಿಕೆಯ ವೇಲೆ ವಿಷಕಾರಿ ರಾಸಾಯನಿಕ ಪತ್ತೆಯಾದ ನಂತರ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ ಔಷಧದ ಉತ್ಪಾದನಾ ಪರವಾನಗಿ ರದ್ದುಗೊಳಿಸುವಂತೆ ಈಗಾಗಲೇ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಸೂಚಿಸಿತ್ತು, ಇದರ ಬೆನ್ನಲ್ಲೇ ಕಂಪನಿಯನ್ನು ಶಾಶ್ವತವಾಗಿ ಮುಚ್ಚಲಾಗಿದೆ

ತಮಿಳುನಾಡು ಔಷಧ ನಿಯಂತ್ರಣ ಇಲಾಖೆಯ 26 ಪುಟಗಳ ವರದಿಯಲ್ಲಿ ಕಾನ್ಸಿಪುರದ ಫಾರ್ಮಾ ಕಾರ್ಖಾನೆಯಲ್ಲಿ ಕೆಮ್ಮಿನ ಸಿರಪ್ ತಯಾರಿಸಲಾದ ಅನೈರ್ಮಲ್ಯ ಪರಿಸ್ಥಿತಿ ಬಹಿರಂಗಪಡಿಸಿದೆ. ರಾಜ್ಯ ಔಷಧ ನಿಯಂತ್ರಕ ಸಂಸ್ಥೆ ಗುರುತಿಸಿರುವ 350 ಉಲ್ಲಂಘನೆಗಳಲ್ಲಿ ತುಕ್ಕು ಹಿಡಿದ ಉಪಕರಣಗಳು ಮತ್ತು ಔಷಧೇತರ ದರ್ಜೆಯ ರಾಸಾಯನಿಕಗಳ ಅಕ್ರಮ ಬಳಕೆ ಸೇರಿವೆ. ತಮಿಳುನಾಡು ನಿಯಂತ್ರಕ ಸಂಸ್ಥೆಯು ನಡೆಸಿದ ತಪಾಸಣೆಯಲ್ಲಿ ಕೈಗಾರಿಕಾ ದ್ರವದ ಶೇಕಡಾ 48ರಷ್ಟು ವರೆಗೆ ಸೇರಿಸಲ್ಪಟ್ಟಿದೆ ಎಂದು ಕಂಡುಬಂದಿದೆ, ಅನುಮತಿಸಲಾದ ಮಿತಿ ಕೇವಲ 0.1 ಪ್ರತಿಶತವಾಗಿದ್ದರೂ ಸಹ ಉತ್ತಮ ಉತ್ಪಾದನಾ ಅಭ್ಯಾಸಗಳ ಪ್ರಮಾಣೀಕರಣದ ಕೊರತೆಯಿದ್ದರೂ, ರಂಗನಾಥನ್ ಅವರ ಕಂಪನಿಯು ಜೆನೆರಿಕ್ ಔಷಧ ತಯಾರಿಸುವುದು ಮತ್ತು ಮಾರಾಟ ಮಾಡುವುದನ್ನು ಮುಂದುವರೆಸಿತ್ತು ಎನ್ನುವ ಸಂಗತಿ ಬಯಲಾಗಿದೆ.

# ಸಹಕಾರ ಇಲಾಖೆಯ ಅಧಿಕಾರಿ ಲೋಕಾಯುಕ್ತ ಬಲೆಗೆ



**ಕಲಬುರಗಿ,ಅ.9:** ಸೇಡಂ ಪಟ್ಟಣದ ಸಹಕಾರಿ ಇಲಾಖೆಯ ಸಹಾಯಕ ನಿಬಂಧಕರ ಕಚೇರಿಯಲ್ಲಿ ಲಂಚ ಪಡೆಯುವಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಇಬ್ಬರು ಅಧಿಕಾರಿಗಳನ್ನು ವಶಕ್ಕೆ ಪಡೆದಿದ್ದಾರೆ.ಸಹಕಾರಿ ಸಂಘಗಳ ಸಹಾಯಕ ನಿಬಂಧಕ ಮಲ್ಲಿಕಾರ್ಜನ ಮತ್ತು ಕಂಪ್ಯೂಟರ್ ಆಪರೇಟರ್ ಸಂಗೀತಾ ಲೋಕಾಯುಕ್ತ ದಾಳಿಗೆ ಒಳಗಾದವರು.

ಬೀರಪ್ಪ ಎನ್ನುವವರು ಕೋಳಿ ಸಾಕಾಣಿಕೆ ಹಾಗೂ ಮಾರಾಟಗಾರರ ಸಹಕಾರಿ ಸಂಘದ ನೋಂದಣಿ ಮಾಡಿಸುವ ಉದ್ದೇಶ ಹೊಂದಿದ್ದರು. ಅದಕ್ಕೆ ಅಧಿಕಾರಿ ಮಲ್ಲಿಕಾರ್ಜುನ ಮತ್ತು ಕಂಪ್ಯೂಟರ್ ಆಪರೇಟರ್ ಸಂಗೀತಾ ಇಬ್ಬರು ಸೇರಿ ರೂ.10 ಸಾವಿರ ಲಂಚದ ಬೇಡಿಕೆ ಇಟ್ಟಿದ್ದರು. ಮುಂಗಡವಾಗಿ ರೂ.2 ಸಾವಿರ ಪಡೆದಿದ್ದರು. ಲಂಚ ನೀಡುವಂತೆ ಬೀರಪ್ಪಗೆ ಆಗಾಗ ಸತಾಯಿಸುತ್ತಿದ್ದರು ಎನ್ನಲಾಗಿದೆ. ಅಧಿಕಾರಿಗಳ ಕಿರುಕುಳ ತಾಳದೆ ಬೀರಪ್ಪ ಬುಧವಾರ ರೂ.5 ಸಾವಿರ ನಗದು ಹಣ ನೀಡುತ್ತಿದ್ದರು. ಅದೇ ವೇಳೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ, ಕಚೇರಿ ದಾಖಲೆಗಳನ್ನು ಪರಿಶೀಲಿಸಿದ್ದಾರೆ. ಇಬ್ಬರನ್ನು ವಶಕ್ಕೆ ಪಡೆದು. ವಿಚಾರಣೆ ನಡೆಯುತ್ತಿದೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ. ಡಿವೈಎಸ್ಪಿ ಗೀತಾ ಬೇನಾಳ್, ಪೊಲೀಸ್ ಇನ್ಸೆಕ್ಟರ್ ಅರುಣಕುಮಾರ್, ಬಸವರಾಜ ಇತರರಿದ್ದರು.

## ಮಹಿಳೆಯರಿಗೆ ಒಂದು ದಿನ ಋತುಚಕ್ರ ರಜೆ

**ಬೆಂಗಳೂರು, ಅ. 9–** ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವಲಯಗಳಲ್ಲಿ ಕಾರ್ಯನಿರ್ವಹಿಸುವ ಮಹಿಳೆಯರಿಗೆ ಪ್ರತಿ ತಿಂಗಳು 1 ದಿನ ಋತುಚಕ್ರ ರಜೆ ನೀತಿಯನ್ನು ರಾಜ್ಯ ಸರ್ಕಾರ ಜಾರಿ ಮಾಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಋತುಚಕ್ರ ರಜೆ ನೀತಿ–2025ಕ್ಕೆ ಅನುಮೋದನೆ ನೀಡಲಾಗಿದೆ.ಈ ಋತುಚಕ್ರ ರಜೆ ನೀತಿಯಂತೆ ರಾಜ್ಯದ ಸರ್ಕಾರಿ ಕಚೇರಿಗಳು, ಐಟಿ ಕಂಪೆನಿಗಳು, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕಂಪೆನಿಗಳು ಮತ್ತು ಖಾಸಗಿ ಕೈಗಾರಿಕೆ ಕಚೇರಿಗಳಲ್ಲೂ ಕೆಲಸ ಮಾಡುವ ಎಲ್ಲ ಮಹಿಳೆಯರಿಗೆ ಪ್ರತಿ ತಿಂಗಳು 1 ದಿನ ವೇತನ ಸಹಿತ ಋತುಚಕ್ರ ರಜೆಯನ್ನು ನೀಡಲಾಗುತ್ತದೆ. ದೇಶದಲ್ಲೇ ಮೊದಲ ಬಾರಿಗೆ ಇಂತಹದೊಂದು ನೀತಿಯನ್ನು ಜಾರಿ ಮಾಡಿದ ಮೊದಲ ರಾಜ್ಯ ಕರ್ನಾಟಕವಾಗಿದೆ.ಖಾಸಗಿ ಕಂಪೆನಿಗಳು ಈ ನೀತಿಯನ್ನು ಅಳವಡಿಸಿಕೊಳ್ಳುವುದು ಕಡ್ಡಾ ಯವಾಗಿದೆ.ರಾಜ್ಯದ ಕಾರ್ಮಿಕ ಇಲಾಖೆ ಈ ಋತುಚಕ್ರ ರಜೆ ನೀತಿ ಪ್ರಸ್ತಾವವನ್ನು ಸಂಪುಟದ ಮುಂದೆ ಮಂಡಿಸಿದ್ದು, ಅದಕ್ಕೆ ಸಂಪುಟ ಒಪ್ಪಿಗೆ ನೀಡಿದೆ.ಬಿಹಾರ ಮತ್ತು ಓರಿಸ್ಸಾದಲ್ಲಿ ವಾರ್ಷಿಕ 12 ದಿನಗಳ ಋತುಚಕ್ರ ರಜೆ ನೀತಿ ಇದ್ದು, ಅದು ಕೇವಲ ಸರ್ಕಾರಿ ಉದ್ಯೋಗಿಗಳಿಗೆ ಮಾತ್ರ ಅನ್ವಯವಾಗುತ್ತಿದೆ.ಇಡೀ ದೇಶದಲ್ಲೇ ಕರ್ನಾಟಕ ಸರ್ಕಾರಿ ಹಾಗೂ ಖಾಸಗಿ ವಲಯದಲ್ಲಿ ಈ ನೀತಿಯನ್ನು ಜಾರಿ ಮಾಡಿದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.ವಿವಿಧ ಕಂಪೆನಿ, ಕಚೇರಿ, ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುವ ಮಹಿಳೆಯರಿಗೆ ಋತುಚಕ್ರ ರಜೆ ನೀಡುವಂತೆ ಪರಿಶೀಲಿಸುವಂತೆ ಇತ್ತೀಚೆಗೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚನೆ ನೀಡಿತ್ತು.ಬೇರೆ ರಾಜ್ಯಗಳು ಈ ನೀತಿಯನ್ನು ಜಾರಿ ಮಾಡುವ ಮೊದಲೇ ರಾಜ್ಯ ಸರ್ಕಾರ ಮಹಿಳೆಯರ ಪರವಾದ ಈ ನೀತಿಯನ್ನು ಜಾರಿ ಮಾಡಿರುವುದು ಮಹಿಳೆಯರ ಪರವಾಗಿ ರಾಜ್ಯ ಸರ್ಕಾರದ ಬದ್ಧತೆಯನ್ನು ಪ್ರದರ್ಶಿಸಿದಂತಾಗಿದೆ.

ರಾಜ್ಯ ಸರ್ಕಾರದ ಈ ನಿರ್ಧಾರದಿಂದ ಮಹಿಳೆಯರ ಬಹು ದಶಕಗಳ ಬೇಡಿಕೆ ಈಡೇರಿದಂತಾಗಿದೆ.

## ಇದೆ ಮೊದಲ ಬಾರಿಗೆ ಭಾರತಕ್ಕೆ ಬಂದ ತಾಲಿಬಾನ್ ಸರ್ಕಾರದ ವಿದೇಶಾಂಗ ಸಚಿವ



**ನವದೆಹಲಿ, ಅ.9–** ತಾಲಿಬಾನ್ ಸರ್ಕಾರದ ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಇಂದು ದೆಹಲಿಗೆ ಆಗಮಿಸಿದ್ದಾರೆ. ಅಫ್ಘಾನಿಸ್ತಾನದಲ್ಲಿ ತಾಲಿಬಾನ್ ಅಧಿಕಾರ ವಹಿಸಿಕೊಂಡ ನಂತರ ಅಲ್ಲಿನ ಸಚಿವರೊಬ್ಬರ ಮೊದಲ ಭಾರತ ಭೇಟಿ ಇದಾಗಿದೆ.

ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಮುತಾಕಿ ಅವರಿಗೆ ಅಂತರ ರಾಷ್ಟ್ರಿಯ ಪ್ರಯಾಣ ನಿರ್ಬಂಧಗಳಿಂದ ತಾತ್ಕಾಲಿಕ ವಿನಾಯಿತಿ ನೀಡಿದ್ದರಿಂದ ಮುತ್ತಕಿ ಭಾರತಕ್ಕೆ ಬಂದಿದ್ದಾರೆ. 2021ರ ಆಗಸ್ಟ್‌ನಲ್ಲಿ ತಾಲಿಬಾನ್ ಅಧಿಕಾರ ವಶಪಡಿಸಿಕೊಂಡ ನಂತರ ಮೊದಲ ಉನ್ನತ ಮಟ್ಟದ ಸಭೆ ನಡೆಯಲಿರುವ ಕಾರಣ ಭಾರತ–ಅಫ್ಘಾನ್ ಸಂಬಂಧದ ಹೊಸ ಅಧ್ಯಾಯ ತೆರೆಯಲಿದೆ. 2022 ರಲ್ಲಿ ಹಿರಿಯ ರಾಜತಾಂತ್ರಿಕ ಜೆಪಿ ಸಿಂಗ್ ನೇತೃತ್ವದ ತಂಡ ಕಾಬೂಲ್ ನಲ್ಲಿ ಅಮೀರ್ ಖಾನ್ ಮುತ್ತಕಿ ಅವರನ್ನು ಭೇಟಿಯಾಗಿತ್ತು.

ಅಫ್ಘಾನಿಸ್ತಾನವನ್ನು ತಾಲಿಬಾನ್ ವಶಪಡಿಸಿಕೊಂಡ ಬಳಿಕ ಇದು ಭಾರತದ ಮೊದಲ ಭೇಟಿಯಾಗಿತ್ತು. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಮತ್ತು ಹಿರಿಯ ಐಎಫ್‌ಎಸ್ ಅಧಿಕಾರಿ ಜೆ.ಪಿ. ಸಿಂಗ್ ಸೇರಿದಂತೆ ಭಾರತೀಯ ಅಧಿಕಾರಿಗಳು ಮುತ್ತಕಿ ಮತ್ತು ಇತರ ತಾಲಿಬಾನ್ ನಾಯಕರೊಂದಿಗೆ ಹಲವು ಸುತ್ತಿನ ಮಾತುಕತೆ ನಡೆಸಿದ್ದಾರೆ.

ಆಗಾಗ ದುಬೈನಂತಹ ತಟಸ್ಥ ಸ್ಥಳಗಳಲ್ಲಿ ಭೇಟಿಯಾಗುತ್ತಿದ್ದರು.ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ದುಬೈನಲ್ಲಿ ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಅವರನ್ನು ಭೇಟಿಯಾಗಿದ್ದರು. ಭಾರತವು ಅಫ್ಘಾನಿಸ್ತಾನಕ್ಕೆ ನೀಡುತ್ತಿರುವ ಮಾನವೀಯ ನೆರವು, ವಿಶೇಷವಾಗಿ ಆರೋಗ್ಯ ವಲಯವನ್ನು ಬಲಪಡಿಸುವುದು ಮತ್ತು ನಿರಾಶ್ರಿತರ ಪುನರ್ವಸತಿಯನ್ನು ಬೆಂಬಲಿಸುವ ಬಗ್ಗೆ ಚರ್ಚೆ ನಡೆಸಲಾಗುತ್ತಿದೆ.


ಕೋವಿಡ್ ಸಮಯದಲ್ಲಿ ಭಾರತ ಉಚಿತವಾಗಿ ಲಸಿಕೆಯನ್ನು ನೀಡಿತ್ತು. ಈಗಲೂ ಭಾರತ ಅಫ್ಘಾನಿಸ್ತಾನಕ್ಕೆ ಆಹಾರ ಉತ್ಪನ್ನಗಳನ್ನು ರಫ್ತು ಮಾಡುತ್ತಿದೆ.ಭಾರತವು ಪಾಕಿಸ್ತಾನದ ವಿರುದ್ಧ ಯಶಸ್ವಿಯಾಗಿ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ನಂತರ ಮೇ 15 ರಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಮುತ್ತಕಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದರು.

ಇದು 2021 ರ ನಂತರದ ಮೊದಲ ಸಚಿವ ಮಟ್ಟದ ಸಂಪರ್ಕವಾಗಿತ್ತು. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ತಾಲಿಬಾನ್ ಖಂಡಿಸಿದ್ದಕ್ಕಾಗಿ ಜೈಶಂಕರ್ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಭಾರತ ಮತ್ತು ಅಫ್ಘಾನ್ ಜನರೊಂದಿಗಿನ ಸಾಂಪ್ರದಾಯಿಕ ಸ್ನೇಹವನ್ನು ಪುನರುಚ್ಚರಿಸಿದರು.

## ಬೈಕ್‌ಗೆ ಅಪರಿಚಿತ ವಾಹನ ಡಿಕ್ಕಿ: ಪತ್ರಕರ್ತ ಸ್ಥಳದಲ್ಲಿ ಸಾವು

**ಜಮಖಂಡಿ:ಅ.9–** ಅಪರಿಚಿತ ವಾಹನವೊಂದು ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಪತ್ರಕರ್ತ ಸ್ಥಳದಲ್ಲಿ ಮೃತಪಟ್ಟಿರುವ ಘಟನೆ ಜರುಗಿದೆ.ಆಲಗೂರ ಗ್ರಾಮದ ಬಸವರಾಜ ಕಾನಗೊಂಡ (42)(ಪತ್ರಕರ್ತ) ಮೃತ ವ್ಯಕ್ತಿ.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಮದರಖಂಡಿ ವ್ಯಾಪ್ತಿಯಲ್ಲಿ ಅಪಘಾತ ಸಂಭವಿಸಿದೆ. ಅಪರಿಚಿತ ವಾಹನ ಡಿಕ್ಕಿ ಹೊಡೆದ ರಭಸಕ್ಕೆ ಪತ್ರಕರ್ತ ಬಸವರಾಜ ಸ್ಥಳದಲ್ಲಿ ಮೃತಪಟ್ಟಿದ್ದಾನೆ.ಹಲವು ವರ್ಷಗಳಿಂದ ಜಮಖಂಡಿಯಲ್ಲಿ ಪತ್ರಕರ್ತನಾಗಿ ಕಾರ್ಯನಿರ್ವಹಿಸುತ್ತಿದ್ದ ಬಸವರಾಜ ರಬಕವಿ ಬನಹಟ್ಟಿ ನಗರದ ತಮ್ಮ ಗೆಳೆಯರನ್ನು ಮಾತನಾಡಿಸಿಕೊಂಡು ವಾಪಸ್ ಬರುವಾಗ ಈ ಅಪಘಾತ ಸಂಭವಿಸಿದೆ. ಅಪಘಾತ ಪಡಿಸಿ ಚಾಲಕ ವಾಹನ ಸಮೇತವಾಗಿ ಪರಾರಿ ಆಗಿದ್ದಾನೆ .ಜಿಲ್ಲಾ ಹೆಚ್ಚುವರಿ ಪೊಲಿಸ ವರೀಷ್ಠಾಧಿಕಾರಿ ಪ್ರಸನ್ನ ದೇಸಾಯಿ,ಸಿಪಿಐ ಮಲ್ಲಪ್ಪ ಮಡ್ಡಿ ಪಿ.ಎಸ್.ಐ ಗಂಗಾಧರ ಪೂಜೆರಿ ನೇತೃತ್ವದ ಪೊಲಿಸ ತಂಡ ಭೇಟಿ ನೀಡಿ ಪರಶೀಲನೆ ನಡೆಸಿದ್ದಾರೆ.ಸಾಯಿ ಪ್ರಿಯಾ ಸುಗರ್ ಮಾಲಿಕ ಸಂಗಮೇಶ ನಿರಾಣಿ ಸ್ಥಳಕ್ಕೆ ಆಗಮಿಸಿ ಮೃತನ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ.ಜಮಖಂಡಿ ಗ್ರಾಮೀಣ ಪೊಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಯುವ ಮಾರ್ಗ

ಶುಕ್ರವಾರ: 10–10–2025

## ಅ.10ರಂದು ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯಿಂದ ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು,ಅ.9–**20 ಜನ ಶಾಸಕರು ಇರುವ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಅಕ್ಟೋಬರ್ 10ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದೆ.ವಿಧಾನಸಭಾ ಸದಸ್ಯರು ಆಗಿರುವ ಹಾಗೂ ಸಮಿತಿಯ ಅಧ್ಯಕ್ಷರಾದ ಎನ್.ಹೆಚ್. ಕೋನರಡ್ಡಿ ಅವರ ನೇತೃತ್ವದ ಸಮಿತಿಯು ಅಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿಯಲ್ಲಿನ ಎಲ್ಲಾ ಯೋಜನೆಗಳ/ ಕಾರ್ಯಕ್ರಮಗಳು ಅನುಷ್ಠಾನಗೊಂಡಿರುವ/ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ ಹಾಗೂ ಇಲಾಖೆಗೆ ಸಂಬಂಧಪಟ್ಟಂತೆ ಇನ್ನಿತರ ವಿಷಯಗಳ ಕುರಿತು ಚರ್ಚಿಸಲಿದೆ.ಮಧ್ಯಾಹ್ನ 1.30ಕ್ಕೆ ಭೋಜನ ವಿರಾಮ ಇರುತ್ತದೆ. ಸಂಜೆ 4 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದೆ.ವಿಧಾನಸಭಾ ಸದಸ್ಯರಾದ ಉಮಾನಾಥ್ ಎ. ಕೋಟ್ಯಾನ್, ಡಾ.ವೈ.ಭರತ್ ಶೆಟ್ಟಿ, ಉದಯ ಬಿ. ಗರುಡಾಚಾರ್, ಹೆಚ್.ಎ. ಇಕ್ಬಾಲ್ ಹುಸೇನ್, ಅಶೋಕ್ ಮಲ್ಲಪ್ಪ ಮನಗೂಳಿ, ಕೊತ್ತೂರು ಜಿ. ಮಂಜುನಾಥ, ನಯನ ಮೋಟಮ್ಮ, ಮಹೇಂದ್ರ ಕಲ್ಲಪ್ಪ ತಮ್ಮಣ್ಣನವರ್, ಪ್ರದೀಪ್ ಈಶ್ವರ್, ಡಿ. ರವಿಶಂಕರ್, ಹೆಚ್.ಕೆ. ಸುರೇಶ್ (ಹಲ್ಲಳ್ಳಿ ಸುರೇಶ್), ಮಂಜುಳಾ ಅರವಿಂದ ಲಿಂಬಾವಳಿ, ಕರೆಮ್ಮ ನಾಯಕ, ಶರಣಗೌಡ ಕಂದಕೂರ ಹಾಗೂ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಚಂದ್ರಶೇಖರ ಬಸವರಾಜ ಪಾಟೀಲ, ಶಾಂತಾರಾಮ್ ಬುಡ್ನಸಿದ್ದಿ, ವೈ.ಎಂ. ಸತೀಶ್, ಶರಣಗೌಡ ಬಯ್ಯಪುರ, ಕೆ. ವಿವೇಕಾನಂದ ಅವರು ಸೇರಿದಂತೆ 20 ಜನ ಶಾಸಕರು ಸಮಿತಿಯಲ್ಲಿ ಸದಸ್ಯರಾಗಿದ್ದಾರೆ ಎಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ಆಯ್ಕೆ: ಅರ್ಜಿ ಸಲ್ಲಿಕೆ ಅವಧಿ ನವಂಬರ್ 13ರವರೆಗೆ ವಿಸ್ತರಣೆ

**ರಾಯಚೂರು,ಅ.9–**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 2025–26ನೇ ಶೈಕ್ಷಣಿಕ ಸಾಲಿನಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಜೀಂ ಪ್ರೇಮ್ ಜೀ ಫೌಂಡೇಶನ್ ಆಯ್ಕೆ ಮಾಡಿರುವ ಮದರಸಾಗಳಲ್ಲಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ನವಂಬರ್ 13ರವರೆಗೆ ವಿಸ್ತರಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಬಾಗಲಕೋಟೆ, ವಿಜಯಪುರ, ಕಲಬುರ್ಗಿ, ಬೆಂಗಳೂರು ನಗರ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯ್ದ ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಧಾರ್ಮಿಕ ಶಿಕ್ಷಣದೊಂದಿಗೆ ಎನ್‌ಐಓಎಸ್ ಮುಖಾಂತರ ಔಪಚಾರಿಕ ಶಿಕ್ಷಣವನ್ನು ನೀಡುವುದರ ಮೂಲಕ ಅವರ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಅಜೀಂ ಪ್ರೇಮ್ ಜೀ ಫೌಂಡೇಶನ್ ಅವರ ಸಹಯೋಗದೊಂದಿಗೆ ಔಪಚಾರಿಕ ಶಿಕ್ಷಣ ವಿಷಯಗಳಾದ ಕನ್ನಡ, ಇಂಗ್ಲೀಷ್, ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ಬೋಧಿಸಲು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಜಿಲ್ಲಾ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಹತೆ: ಅಭ್ಯರ್ಥಿಗಳು, ಡಿಇಡಿ ಅಥವಾ ಬಿಇಡಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಉರ್ದು ಭಾಷೆಯಲ್ಲಿ ಕುಶಲತೆಯನ್ನು ಹೊಂದಿರಬೇಕು. ಟಿಇಟಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್ ವಿಳಾಸ: https:// dom.karnataka.gov.in. ಇಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಪಡೆದು ಹಾಗೂ https:// docs.google.com/forms/d/1xIEm6-RFzb6-2DaMhr-FITR8LScGU0iuwplQElElErI/editF ಲಿಂಕ್‌ನ ಮೂಲಕ ಮಾರ್ಗಸೂಚಿಗಳನ್ವಯ ಅರ್ಜಿಯನ್ನು ಸಲ್ಲಿಸಬಹ್ಮದಾಗಿದೆ.ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ತಂತಿ ತಗುಲಿ ಯುವಕ ಸಾವು

**ಜಮಖಂಡಿ,ಅ.9–** ನಗರದ ಶಿಕ್ಕಲಗಾರ ಕಾಲೋನಿಯಲ್ಲಿ ವಿದ್ಯುತ್ ತಂತಿ ತಗುಲಿ ಯುವಕ ಮೃತ ಪಟ್ಟಿರುವ ಘಟನೆ ಜರುಗಿದೆ.ಮೃತ ಯುವಕನನ್ನ ದರ್ಶನ ಶಿಕ್ಕಲಗಾರ(20) ಎಂದು ಗುರ್ತಿಸಲಾಗಿದೆ.ಸ್ಥಳಕ್ಕೆ ಜಮಖಂಡಿ ಶಹರ ಪೋಲಿಸ್ ಠಾಣೆ ಅಪರಾಧ ವಿಭಾಗದ ಪಿ.ಎಸ್.ಐ ಎನ್.ಕೆ.ಕಾಜಗಾರ,ಸಿಬ್ಬಂದ್ದಿಗಳಾದ ರಾಜು ಶಿಂಧೆ,ಶಿವಾನಂದ ಪಾಟೀಲ,ಐ.ಜಿ.ದಾಶಾಳ,ಭೀಮು ವಾಲಿಕಾರ,ನೇತೃತ್ವದ ಪೋಲಿಸ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಬಿದಿರು ಬಡಿಗೆ ಹಿಡಿದು ಏನೋ ಕೆಲಸ ಮಾಡಲು ಹೋದಾಗ ದೇವಸ್ಥಾನದ ಮೇಲೆ ಹಾಯ್ದು ಹೋಗಿರುವ ತಂತಿಗಳು ತಗುಲಿ ದುರ್ಘಟನೆ ಜರುಗಿದೆ ಎಂದು ತಿಳಿದುಬಂದಿದೆ.ಈ ಕಾಲೂನಿಯ ಮನೆಗಳ ಮೇಲೆ ಅಪಾಯಕಾರಿ ವಿದ್ಯುತ್ ಲೈನಗಳು ಹಾದು ಹೋಗಿದ್ದರಿಂದ ಇಲ್ಲಿಯ ಜನರು ತಮ್ಮ ಜೀವ ಕೈಯಲ್ಲಿ ಹಿಡಿದುಕೊಂಡು ಜೀವನ ಸಾಗಿಸುತ್ತಿದ್ದಾರೆ.ಸಂಬಂದಪಟ್ಟ ಅಧಿಕಾರಿಗಳು ಎಚ್ಚತ್ತುಕೊಂಡು ಮನೆ ಮೇಲೆ ಹಾಯಿದು ಹೋಗಿರುವ ವಿದ್ಯುತ್ ತಂತಿ ತೆರವುಗೊಳಿಸಿ, ಸಮಸ್ಯೆ ಬಗೆಹರಿಸಬೇಕು ಎಂದು ಕಾಲೊನಿ ನಿವಾಸಿಗಳು ಆಗ್ರಹಿಸಿದ್ದಾರೆ.

# ವಕೀಲ ಕಿಶೋರ್ ವಿರುದ್ಧ ಕಿಠಿಣ ಕ್ರಮಕ್ಕೆ ವಕೀಲರ ಸಂಘ ಆಗ್ರಹ

**ಯುವ ಮಾರ್ಗ ಸುದ್ದಿ**




**ಮಾನ್ವಿ,ಅ.9–**ವಕೀಲ ರಾಕೇಶ್ ಕಿಶೋರ್ ಅವರು ಮುಖ್ಯ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಅವರ ನೇತೃತ್ವದ ಪೀಠದ ಮೇಲೆ ಶೂ ಎಸೆದ ಘಟನೆಯನ್ನು ಖಂಡಿಸಿ ಮಾನ್ವಿ ವಕೀಲರ ಸಂಘ ಕಲಾಪದಿಂದ ದೂರು ಉಳಿದು ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಕೃತ್ಯವು ರಾಷ್ಟ್ರದ ಅತ್ಯುನ್ನತ ನ್ಯಾಯಾಂಗ ಸಂಸ್ಥೆಗೆ ಮಾಡಿದ ಅಗೌರವ ಮಾತ್ರವಲ್ಲದೆ, ಕಾನೂನು ಮತ್ತು ಪ್ರಜಾಪ್ರಭುತ್ವದ ಘನತೆಗೆ ಮಾಡಿದ ಅವಮಾನವಾಗಿದೆ. ಇಂತಹ ಕೃತ್ಯವು "ನಮ್ಮ ರಾಷ್ಟ್ರದ ಅತ್ಯುನ್ನತ ನ್ಯಾಯಾಂಗ ಸಂಸ್ಥೆಗೆ ಅಗೌರವ ತೋರುವುದಲ್ಲದೆ, ಕಾನೂನು ನಿಯಮ ಮತ್ತು ನಮ್ಮ ಪ್ರಜಾಸತ್ತಾತ್ಮಕ ಚೌಕಟ್ಟಿನ ಘನತೆಗೆ ಮಾಡಿದ ಅವಮಾನವಾಗಿದೆ." ಸಂವಿಧಾನದ ಅಧಿಕಾರವನ್ನು ದುರ್ಬಲಗೊಳಿಸುವ ಯಾವುದೇ ಪ್ರಯತ್ನವನ್ನು ಸಹಿಸಲಾಗದು ಮತ್ತು ಖಂಡನೀಯ ವಕೀಲ ರಾಕೇಶ್ ಕಿಶೋರ್ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ವಕೀಲರಾದ ರವಿಕು ಮಾರ್ ಪಾಟೀಲ್, ಮನೋಹರ್ ವಿಶ್ವಕ ರ್ಮ, ಕೊರವಯ್ಯ ನಾಯಕ, ಗುಮ್ಮ ಬಸವರಾಜ, ಬಿ.ಕೆ.ಅಮರೇಶಪ್ಪ, ರಾಜಾ ಶ್ಯಾಮಸುಂದರ ನಾಯಕ, ಮಲ್ಲಿಕಾರ್ಜುನ ಪಾಟೀಲ್, ವೀರನಗೌಡ, ಶಿವರಾಜ ನಾ ಯಕ ಚನ್ನಬಸವ ನಾಯಕ, ದತ್ತಾತ್ರೇಯ ಹಿರೇಕೊಟ್ನೆಕಲ್ , ಮಲ್ಲೇಶ ಮಾಚನೂರು, ಯಲ್ಲಪ್ಪ ಹಿರೇಬಾದರದಿನ್ನಿ ಸೇರಿದಂತೆ ಆನೇಕರು ಇದ್ದರು.

# ಖಾನಾಪೂರ: ಅದ್ದೂರಿಯಾಗಿ ವಾಲ್ಮೀಕಿ ಜಯಂತಿ ಆಚರಣೆ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಅ.9–** ತಾಲೂಕಿನ ಖಾನಾಪೂರ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಕಾಯರ್ಕ್ರಮವನ್ನು ಆಚರಣೆ ಮಾಡಲಾಯಿತು.

ಗ್ರಾಮದ ಬೀದಿಯಲ್ಲಿ ಮಹರ್ಷಿ ವಾಲ್ಮೀಕಿ ಭಾವಚಿತ್ರ ಮೆರವಣಿಗೆಯಲ್ಲಿ ಡೊಳ್ಳು ವಾದ್ಯದೊಂದಿಗೆ ವಾಲ್ಮೀಕಿ ವೃತ್ತ ತಲುಪಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವಿಸಲಾಯಿತು.

ಪುಷ್ಪಾರ್ಚನೆ ಸಲ್ಲಿಸಿ ವೆಂಕನಗೌಡ ಮಾತನಾಡಿ, "ಶ್ರೀರಾಮನ ಜೀವನ ಚರಿತ್ರೆಯನ್ನು ವಿವರಿಸುವ ರಾಮಾಯಣವನ್ನು ಬರೆದಂತಹ ವಾಲ್ಮೀಕಿಯವರಿಗೆ ಪ್ರತಿಯೊಬ್ಬರು ಗೌರವ ಸಲ್ಲಿಸಬೇಕು," ಎಂದರು.

ನಂತರ ಲಿಂಗಸೂಗೂರು ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ದೇವದುರ್ಗ ಸಿಪಿಐ ಗುಂಡೂರಾವ್, ಗಬ್ಬೂರು ಪಿಎಸ್‌ಐ ಅರುಣಕುಮಾರ, ಪ್ರಭಯ್ಯ ತಾತ ಗುರುವಿನ್, ಸೇರಿದಂತೆ ಅನೇಕರು ಮಾತನಾಡಿದರು.

ಈ ಜಯಂತಿಯಲ್ಲಿ ಸರ್ವ ಧರ್ಮದ ಮುಖಂಡರಿಗೆ ವಾಲ್ಮೀಕಿ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶೇಖರಯ್ಯ ತಾತ, ಅಮರೇಶ ಗೌಡ, ಸಿದ್ದನಗೌಡ ಮಾಲಿ ಪಾಟೀಲ್, ಮಾಸ್ತನ್ ನಾಯಕ, ಬಸವಲಿಂಗ ನಾಯಕ, ಬಸವಲಿಂಗ ದೊರೆ, ಶರಣಪ್ಪ ಪಲಮದೊಡ್ಡಿ, ನಾಗರಾಜ ಖಾನಾಪುರ, ಲಿಂಗಯ್ಯ ಪೂಜಾರಿ, ಗೂಳಿ ಮಲ್ಲಯ್ಯ, ಹುಸೇನ್ ಬಾಷ, ಬಾಬುಸಾಬ್, ಹನುಮಂತ, ಸೇರಿದಂತೆ ಅನೇಕರಿದ್ದರು.

# ಬಿದ್ರಿ ಕಲೆಗೆ ಹೆಚ್ಚು ಆದ್ಯತೆ ಕೊಡಿ : ಶಿಲ್ಪಾ ಶರ್ಮಾ



**ಬೀದರ,ಅ.9–** ನಗರದ ಮೈಲೂರ ರಸ್ತೆಯಲ್ಲಿರುವ ಜಿಎನ್‌ಡಿ ಇಂಜಿನೀಯರಿಂಗ್ ಕಾಲೇಜನಲ್ಲಿ ನಡೆದ ಬೀದ್ರಿ ಕಲೆ ಮತ್ತು ಕೌಶಲ್ಯ ಅಭಿವೃದ್ಧಿ ಕೇಂದ್ರದ ಉದ್ಘಾಟನೆ ಸಮಾರಂಭದಲ್ಲಿ ಬೀದರಿನ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ಬೀದ್ರಿ ಕಲೆಗೆ ದೇಶ ಹಾಗೂ ವಿದೇಶಗಳಲ್ಲಿ ಹೆಚ್ಚು ಬೇಡಿಕೆ ಇದ್ದು, ಇದರಲ್ಲಿ ಹೊಸ ಹೊಸ ವಿನ್ಯಾಸದೊಂದಿಗೆ ಸಾಗಬೇಕು ಮತ್ತು ಗುಣಮಟ್ಟದ ಉತ್ಪನ್ನಕ್ಕೆ ಹೆಚ್ಚು ಮಹತ್ವಕೊಡಬೇಕು ಎಂದು ಒತ್ತಿ ಹೇಳಿದರು.

ಬೀದ್ರಿ ಕಲೆಗೆ ಬೇಡಿಕೆ ಜಾಸ್ತಿ ಇದ್ದು, ಆದರೆ ತಯ್ಯಾರಿಕರು ಕಡಿಮೆ ಸಂಖ್ಯೆಯಲ್ಲಿ ಇದ್ದಾರೆ. ಇದಕ್ಕೆ ಹೊಸ ಜೀವ ಕೊಡುವುದ್ದಾಕ್ಕಾಗಿ ಗುರು ನಾನಕ ಝಿರಾ ಇಂರ್ಟ್ರನ್ಸಿಪ್ ರಿಸರ್ಜ ಮತ್ತು ಬ್ಯುಸೆನ್ಸ್ ಇಂಕುಬೇಷನ್ ಫೌಂಡೇಷನ್ ಮುಂದಾಗಿದ್ದು ಇಲ್ಲಿಯ ಜನತೆಗೆ ಒಂದು ಸುವರ್ಣ ಆವಕಾಶ ಕೊಟ್ಟಂತಾಗಿದೆ ಎಂದು ನುಡಿದರು.

ಇನ್ನೊರ್ವ ಅತಿಥಿ ಮಾಜಿ ಹೆಚ್ಚುವರಿ ಕಾರ್ಯದರ್ಶಿ ಕರ್ನಾಟಕ ಸರಕಾರ ಕೆ.ಜಯರಾಜ್ ಅವರು ಮಾತನಾಡುತ್ತ ಬಿದ್ರಿ ಕಲೆಯೂ ಮುಳುಗುವ ಹಂತದಲ್ಲಿದ್ದು, ಕಾಲೇಜಿಲ್ಲಿ ಕೇಂದ್ರ ಸ್ಥಾಪನೆಗೆ ಗುರು ನಾನಕ ಆಡಳಿತ ಮಂಡಳಿ ಮುಂದಾಗಿದ್ದು ಹರ್ಷ ತಂದಿದೆ ಎಂದು ನುಡಿದರು. ಬಿದ್ರಿ ಕಲೆಯೂ ಕೇವಲ ಆರ್ಥಿಕ ಅಭಿವೃದ್ಧಿ ಅಲ್ಲದೆ ಒಟ್ಟಾರೆ ಸಮಾಜಿಕ ಅಭಿವೃದ್ಧಿಗೆ ಕಾರಣವಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಮಾತನಾಡುತ್ತ ನಮ್ಮ ಕಾಲೇಜಿನ ಆವರಣದಲ್ಲಿ ಕೇಂದ್ರ ಸ್ಥಾಪನೆಗೊಂಡಿದ್ದು ಹೆಮ್ಮೆಯ ವಿಷಯವಾಗಿದೆ. ಬಿದ್ರಿ ಕಲೆ ಮತ್ತು ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸುವುದು ಮತ್ತು ಶಿಕ್ಷಣವನ್ನು ನಾವೀನ್ಯತೆಯೊಂದಿಗೆ ಬೆರೆಸುವುದು ಸಂಸ್ಥೆಗೆ ಹೆಮ್ಮೆ ಮತ್ತು ತೃಪ್ತಿಯ ವಿಷಯವಾಗಿದೆ, ಸಾಮಾಜಿಕ ಸಬಲೀಕರಣಕ್ಕಾಗಿ ಆತ್ಯಾಧುನಿಕ ಮೂಲ ಸೌಕರ್ಯವನ್ನು ಸ್ಥಾಪಿಉವುದು ಮತ್ತು ಕಲ್ಪನೆಗಳನ್ನು ವಾಸ್ತವ್ಯಕ್ಕೆ ತುರುವುದು ನಮ್ಮ ಗುರಿಯಾಗಿದೆ ಎಂದು ನುಡಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ವೀಣಾ ಎಸ್. ಸ್ವಾಗತ ಕೋರಿದರೆ, ರಾಕೇಶ್ ಮಾಥೂರಕರ್ ವಂದನಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಬಲಬೀರ್ ಸಿಂಗ್, ಶ್ರೀಮತಿ ಶೈನಿ ಪ್ರದೀಪ್ ಗುಂಟಿ, ಜಂಟಿ ನಿರ್ದೇಶಕರು ಜಿಲ್ಲಾ ಕೈಗಾರಿಕಾ ಕೇಂದ್ರ ಬಿದರಿನ ಸುರೇಖಾ ಇದ್ದರು.

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮ ಅ.13ಕ್ಕೆ

**ರಾಯಚೂರು,ಅ.9–** ಕಾರ್ಮಿಕ ಇಲಾಖೆಯಿಂದ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮವನ್ನು ಅಕ್ಟೋಬರ್ 13ರ ಬೆಳಿಗ್ಗೆ 11ಗಂಟೆಗೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಕಾರ್ಯಕ್ರಮ ಉದ್ಘಾಟಿಸುವರು.ಕಾರ್ಮಿಕ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಘನ ಉಪಸ್ಥಿತಿ ವಹಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಗೌರವ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಾರ್ಮಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್, ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳು ಆಯುಕ್ತರಾದ ಡಾ.ಎಚ್.ಎನ್. ಗೋಪಾಲಕೃಷ್ಣ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಡಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಕಾರ್ಮಿಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ಕೆಲಸ ಮಾಡುತ್ತಿದ್ದ ಅಂಗಡಿಯಲ್ಲೇ ಚಿನ್ನ ಕದ್ದ ಇಬ್ಬರು ಸೆರೆ

**ಬೆಂಗಳೂರು,ಅ.9–**ಕೆಲಸ ಮಾಡಿಕೊಂಡಿದ್ದ ಜ್ಯೂವೆಲರಿ ಅಂಗಡಿಯಲ್ಲಿಯೇ, ಚಿನ್ನಾಭರಣಗಳನ್ನು ಕಳುವು ಮಾಡಿದ್ದ ಇಬ್ಬರನ್ನು ಬಂಧಿಸಿರುವ ಜಾಲಹಳ್ಳಿ ಪೊಲೀಸರು 45 ಲಕ್ಷ ಮೌಲ್ಯದ 429.02 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ.ಮಹವೀರ್ ಸಿಂಗ್ (20)ಕುಲದೀಪ್ ಸಿಂಗ್(22)ಬಂಧಿತ ಆರೋಪಿಗಳಾಗಿದ್ದು, ಬಂಧಿತರಿಂದ 45 ಲಕ್ಷ ಮೌಲ್ಯದ 429.02 ಗ್ರಾಂ ಚಿನ್ನಾಭರಣಗಳನ್ನು ಜಪ್ತಿ ಮಾಡಿ ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ.

ಜಾಲಹಳ್ಳಿಯ ಮುತ್ಯಾಲನಗರದಲ್ಲಿ ಜ್ಯೂವೆಲರಿ ಅಂಗಡಿಯ ಮಾಲೀಕ ಹಾಗೂ ಅವರ ಪುತ್ರ ಸೆ.26 ರಂದು ಮಧ್ಯಾಹ್ನ ಊಟಕ್ಕೆಂದು ಮನೆಗೆ ಹೋಗಿದ್ದ ವೇಳೆ ಕೆಲಸಕ್ಕಿದ್ದ ಅಂಗಡಿಯ ಲಾಕರ್‌ನಲ್ಲಿದ್ದ 540 ಗ್ರಾಂ ಚಿನ್ನದ ಆಭರಣಗಳನ್ನು ಕಳುವು ಪರಾರಿಯಾಗಿದ್ದ ಪ್ರಕರಣ ದಾಖಲಿಸಿದ ಜಾಲಹಳ್ಳಿ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆಯನ್ನು ಕೈಗೊಂಡು ಉಪ್ಪಾರಪೇಟೆಯ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣ ಬಳಿ, ಜ್ಯೂವೆಲರಿ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದ ಆರೋಪಿ ಹಾಗೂ ಆತನಿಗೆ ಕಳವು ಮಾಡಲು ಸಹಕರಿಸಿದ ಸಹಚರ ಸೇರಿ ಇಬ್ಬರನ್ನು ಬಂಧಿಸಲಾಗಿದೆ.ಜಾಲಹಳ್ಳಿ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದೇಗೌಡ ಮತ್ತವರ ಸಿಬ್ಬಂದಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H